ಸಂಪುಟ: 11 ಸಂಚಿಕೆ: 194 ಪುಟ: 4+2 ಬೆಲೆ : 3.00 ಭಾನುವಾರ, ಸೆಪ್ಟೆಂಬರ್ 06, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 194 Pages : 4+2 Rate : 3.00 Sunday, September 06, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಖಾಲಿ ನಿವೇಶನ ಸ್ವಚ್ಛವಾಗಿಡದಿದ್ದರೆ 30 ಸಾವಿರದವರೆಗೆ ದಂಡ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಖಾಲಿ ನಿವೇಶನಗಳ ಮಾಲೀಕರು ತಮ್ಮ ನಿವೇಶನದಲ್ಲಿರುವ ಗಿಡಗಂಟಿ ಹಾಗೂ ಕಸವನ್ನು ತೆರವುಗೊಳಿಸಿ ಸ್ವಚ್ಛವಾಗಿಟ್ಟುಕೊಳ್ಳುವಂತೆ ನಗರಸಭೆ ಸೂಚಿಸಿದೆ. ಈ ಕುರಿತು ಈಗಾಗಲೇ ಪತ್ರಿಕೆ ಹಾಗೂ ನಗರಸಭೆಯ ಆಟೋಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡಲಾಗಿದ್ದು, ಸೆ.೧೦ರೊಳಗೆ ತಮ್ಮ ಹೆಸರಿನಲ್ಲಿರುವ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸುವಂತೆ ಪೌರಾಯುಕ್ತ ರಾಜಾರಾಮ ಪವಾರ್ ತಿಳಿಸಿದ್ದಾರೆ. ನಿಗದಿತ ಅವಧಿಯೊಳಗೆ ನಿವೇಶನ ಸ್ವಚ್ಛಗೊಳಿಸದಿದ್ದರೆ ನಗರಸಭೆಯಿಂದಲೇ ಸ್ವಚ್ಛತಾ ಕಾರ್ಯ ಕೈಗೊಂಡು, ಅದಕ್ಕೆ ತಗಲುವ ವೆಚ್ಚವನ್ನು ಆಸ್ತಿ ಮಾಲೀಕರಿಂದ ವಸೂಲಿ ಮಾಡಲಾಗುವುದು. ನಗರಸಭೆಯಿಂದ ಸ್ವಚ್ಛಗೊಳಿಸಿದ ನಂತರ ಅದರ ವೆಚ್ಚವನ್ನು ಪಾವತಿಸದಿದ್ದಲ್ಲಿ ಸಂಬಂಧಿಸಿದ ಆಸ್ತಿಯ ವಿರುದ್ಧ ಕಾನೂನು ಪ್ರಕಾರ ಕ್ರಮ ಜರುಗಿಸಿ, ಆಸ್ತಿಯ ಮೇಲೆ ಭೂಜಾ ದಾಖಲೆ ಮಾಡಲಾಗುವುದು ಎಂದು ಎಚ್ಚರಿಸಿದ್ದಾರೆ.

### ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದನೆ; ಬಾಕಿ ಅರ್ಜಿಗಳಿಗೂ ಕಾಲಮಿತಿಯಲ್ಲಿ ಪರಿಹಾರ

# ‘ಅಹವಾಲು ನಿಮ್ಮದು; ಪರಿಹಾರ ನಮ್ಮದು’

**ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕರು ಸಲ್ಲಿಸುವ ಅಹವಾಲುಗಳನ್ನು ಸ್ವೀಕರಿಸಿ ಕಡತಕ್ಕೆ ಸೀಮಿತಗೊಳಿಸದೆ, ಸಮಸ್ಯೆ ಬಗೆಹರಿಯುವವರೆಗೆ ನಿರಂತರ ಅನುಸರಣೆ ನಡೆಸಿ ಪರಿಹಾರ ಕಲ್ಪಿಸಲಾಗುವುದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಶನಿವಾರ ಜಿಲ್ಲಾಡಳಿತದ ನೇತೃತ್ವದಲ್ಲಿ ನಡೆದ ‘ಪ್ರಜಾ ಸೇವಾ ಅಭಿಯಾನ?ಜನ ಸಂಪರ್ಕ ಸಭೆ’ ಉದ್ಘಾಟಿಸಿ ಅವರು ಮಾತನಾಡಿದರು.

‘ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ’ ಹಾಗೂ ‘ಅಹವಾಲು ನಿಮ್ಮದು, ಪರಿಹಾರ ನಮ್ಮದು’ ಎಂಬ ಆಶಯದೊಂದಿಗೆ ನಡೆಯುತ್ತಿರುವ ಅಭಿಯಾನವು ಸರ್ಕಾರದ ಸೇವೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಮಹತ್ವದ ಹೆಜ್ಜೆಯಾಗಿದೆ. ಸಾರ್ವಜನಿಕರು ಸಮಸ್ಯೆಗಳ ಪರಿಹಾರಕ್ಕಾಗಿ ಕಚೇರಿಯಿಂದ ಕಚೇರಿಗೆ ಅಲೆದಾಡುವ ಪರಿಸ್ಥಿತಿ ತಪ್ಪಿಸುವುದು ಇದರ ಉದ್ದೇಶವಾಗಿದೆ ಎಂದರು.

**ಪ್ರತಿ ಶನಿವಾರ ಅಹವಾಲುಗಳ ಪರಿಶೀಲನೆ**

ಪ್ರತಿ ಮನೆಗೂ ಅಹವಾಲು ಸಲ್ಲಿಸಲು ಅರ್ಜಿ ನಮೂನೆಗಳನ್ನು ನೀಡಲಾಗಿದ್ದು, ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಸ್ಪಷ್ಟವಾಗಿ ನಮೂದಿಸಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು.

ಜನ ಸಂಪರ್ಕ ಸಭೆಯಲ್ಲಿ ಸ್ವೀಕರಿಸಿದ ಅಹವಾಲುಗಳ ಮೇಲೆ ಕೈಗೊಂಡ ಕ್ರಮಗಳ ಕುರಿತು ಪ್ರತಿ ಶನಿವಾರ ಪರಿಶೀಲನೆ ನಡೆಸಲಾಗುವುದು. ಸಮಸ್ಯೆ ಇತ್ಯರ್ಥವಾಗುವವರೆಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ನಿರಂತರ ಅನುಸರಣೆ ಮಾಡಲಾಗುವುದು ಎಂದು ಶ್ರೀಧರ್ ತಿಳಿಸಿದರು.



ಸರ್ಕಾರದ ವಿವಿಧ ಯೋಜನೆಗಳು, ಸೌಲಭ್ಯಗಳು ಹಾಗೂ ಇಲಾಖೆಗಳ ಸೇವೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಯಾವುದೇ ಕಾರಣಕ್ಕೂ ಅರ್ಹರು ಸೌಲಭ್ಯಗಳಿಂದ ವಂಚಿತರಾಗಬಾರದು. ಸಾರ್ವಜನಿಕರು ಮಧ್ಯವರ್ತಿಗಳನ್ನು ಅವಲಂಬಿಸದೆ ನೇರವಾಗಿ ಅಧಿಕಾರಿಗಳನ್ನು ಸಂಪರ್ಕಿಸಿ ಅರ್ಜಿ ಸಲ್ಲಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲೆಯ ವಿವಿಧೆಡೆಯಿಂದ ಆಗಮಿಸಿದ್ದ ಸಾರ್ವಜನಿಕರು ಕಂದಾಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಪೊಲೀಸ್, ಅರಣ್ಯ, ಕೃಷಿ ಸೇರಿದಂತೆ ವಿವಿಧ ಇಲಾಖೆಗಳ ವ್ಯಾಪ್ತಿಯ ವೈಯಕ್ತಿಕ ಹಾಗೂ ಸಾರ್ವಜನಿಕ ಸಮಸ್ಯೆಗಳನ್ನು ಅಧಿಕಾರಿಗಳ ಮುಂದಿಟ್ಟರು.

ಕೆಲವು ಅಹವಾಲುಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಲಾಯಿತು. ಸ್ಥಳ ಪರಿಶೀಲನೆ, ದಾಖಲೆ ಪರಿಶೀಲನೆ ಅಥವಾ ಇಲಾಖೆಯ ಅನುಮತಿ ಅಗತ್ಯವಿದ್ದ ಪ್ರಕರಣಗಳನ್ನು ಸಂಬಂಧಿಸಿದ ಅಧಿಕಾರಿಗಳಿಗೆ ವಹಿಸಿ, ನಿಗದಿತ ಅವಧಿಯಲ್ಲಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಜನರ ಸಮಸ್ಯೆಗಳನ್ನು ಕೇವಲ ಅರ್ಜಿಗಳಾಗಿ ಪರಿಗಣಿಸದೆ, ಅವುಗಳ ಹಿಂದಿರುವ ವಾಸ್ತವಿಕ ಪರಿಸ್ಥಿತಿಯನ್ನು ಅರಿತು ಪರಿಹಾರ ಕಲ್ಪಿಸುವುದೇ ಜನ ಸಂಪರ್ಕ ಸಭೆಯ ಉದ್ದೇಶವಾಗಿದೆ.

ಈ ಮೂಲಕ ಆಡಳಿತ ಮತ್ತು ಸಾರ್ವಜನಿಕರ ನಡುವಿನ ನೇರ ಸಂಪರ್ಕವನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕುಮಾರ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಹಾಯಕ ಆಯುಕ್ತ ಗಂಗಪ್ಪ ಎಂ. ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್. ಸ್ವಾಗತಿಸಿ ಕಾರ್ಯಕ್ರಮದ ಉದ್ದೇಶ ವಿವರಿಸಿದರು. ವೆಂಕಟೇಶ್ ಆಲ್ಕೋಡ ಮತ್ತು ತಂಡ ನಾಡಗೀತೆ ಪ್ರಸ್ತುತಪಡಿಸಿದರು.

### ಅಧಿಕಾರಿಗಳಿಗೆ ಸ್ಪಷ್ಟ ಹೊಣೆಗಾರಿಕೆ

ಅಹವಾಲು ಸ್ವೀಕರಿಸಿದ ಬಳಿಕ ಅದನ್ನು ಯಾವ ಇಲಾಖೆಗೆ ವಹಿಸಲಾಗಿದೆ, ಕೈಗೊಂಡ ಕ್ರಮವೇನು ಹಾಗೂ ಸಮಸ್ಯೆ ಇತ್ಯರ್ಥವಾಗಿದೆಯೇ ಎಂಬುದರ ಮೇಲೆ ಜಿಲ್ಲಾಡಳಿತ ನಿಗಾ ವಹಿಸಲಿದೆ. ಹೀಗಾಗಿ ಜನ ಸಂಪರ್ಕ ಸಭೆ ಕೇವಲ ಅಹವಾಲು ಸ್ವೀಕಾರ ಕಾರ್ಯಕ್ರಮವಾಗದೆ, ಪರಿಹಾರಕ್ಕೆ ಹೊಣೆಗಾರಿಕೆ ನಿಗದಿಪಡಿಸುವ ವೇದಿಕೆಯಾಗಿ ರೂಪುಗೊಳ್ಳಲಿದೆ.

> ಸಾರ್ವಜನಿಕರಿಂದ ಸ್ವೀಕರಿಸುವ ಪ್ರತಿಯೊಂದು ಅರ್ಜಿಯೂ ಸಂಬಂಧಿಸಿದ ಇಲಾಖೆಯ ಗಮನಕ್ಕೆ ಹೋಗಬೇಕು. ಅರ್ಜಿ ಸ್ವೀಕರಿಸಿ ಅಲ್ಲಿಗೇ ಕೈಬಿಡುವ ವ್ಯವಸ್ಥೆ ಇದಲ್ಲ. ಸಮಸ್ಯೆ ಬಗೆಹರಿಯುವವರೆಗೆ ಅನುಸರಣೆ ನಡೆಸಲಾಗುವುದು. ಅರ್ಜಿಯ ಕುರಿತು ಕೈಗೊಂಡ ಕ್ರಮ ಹಾಗೂ ದೊರೆತ ಪರಿಹಾರದ ಬಗ್ಗೆಯೂ ಪರಿಶೀಲನೆ ನಡೆಸಲಾಗುತ್ತದೆ.
>
> - ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

---

### ಬೋಧನೆಗೆ ಹೆಚ್ಚಿನ ಸಮಯ ಮೀಸಲಿಡಿ: ಶಿಕ್ಷಕರಿಗೆ ಎಸ್.ವಿ. ಸಂಕನೂರ ಕರೆ

# ಶಿಕ್ಷಕರ ಪರಿಶ್ರಮಕ್ಕೆ ಶೇ.94ರ ಫಲಿತಾಂಶದ ಕಿರೀಟ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರು ಆಧುನಿಕ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಹೆಚ್ಚಿನ ಸಮಯ ಮೀಸಲಿಡಬೇಕು. ಬೋಧನಾ ಕಾರ್ಯಕ್ಕೆ ಆದ್ಯತೆ ನೀಡುವ ಮೂಲಕ ಶಿಕ್ಷಣದ ಗುಣಮಟ್ಟವನ್ನು ಮತ್ತಷ್ಟು ಹೆಚ್ಚಿಸುವ ಅಗತ್ಯವಿದೆ ಎಂದು ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ ಹೇಳಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಶನಿವಾರ ಆಯೋಜಿಸಿದ್ದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯದ ಸರಾಸರಿ ಫಲಿತಾಂಶ ಶೇ.93 ಇದ್ದರೆ, ಗದಗ ಜಿಲ್ಲೆ ಶೇ.94ರಷ್ಟು ಫಲಿತಾಂಶ ದಾಖಲಿಸಿ ರಾಜ್ಯದ ಸರಾಸರಿಯನ್ನು ಮೀರಿದೆ. ಇದಕ್ಕೆ ಜಿಲ್ಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳ ನಿರಂತರ ಪರಿಶ್ರಮವೇ ಕಾರಣ ಎಂದು ಸಂಕನೂರ ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಲಾ ಅವಧಿಗೂ ಮುನ್ನ ಹಾಗೂ ನಂತರ ಪರಿಹಾರ ಬೋಧನೆ, ಪರೀಕ್ಷಾ ಸಂದರ್ಭದಲ್ಲಿ ‘ಓದಿನ ಮನೆ’ ಸೇರಿದಂತೆ ವಿವಿಧ ಶೈಕ್ಷಣಿಕ ಚಟುವಟಿಕೆಗಳನ್ನು ಹಮ್ಮಿಕೊಂಡು ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಶ್ರಮಿಸಿದ ಶಿಕ್ಷಕರ ಸೇವೆಯನ್ನು ಶ್ಲಾಘಿಸಿದರು.



> ಶಿಕ್ಷಕ ವೃತ್ತಿ ಸಮಾಜ ನಿರ್ಮಾಣದ ಪ್ರಮುಖ ಕೊಂಡಿಯಾಗಿದೆ. ಶಿಕ್ಷಕರು ಪಠ್ಯ ಬೋಧನೆಗೆ ಮಾತ್ರ ಸೀಮಿತವಾಗದೆ, ವಿದ್ಯಾರ್ಥಿಗಳಲ್ಲಿ ಉತ್ತಮ ಮೌಲ್ಯಗಳು, ಶಿಸ್ತು, ಜವಾಬ್ದಾರಿ ಹಾಗೂ ಆತ್ಮವಿಶ್ವಾಸ ಬೆಳೆಸುವ ಕೆಲಸಕ್ಕೂ ಆದ್ಯತೆ ನೀಡಬೇಕು. ಶಿಕ್ಷಕರ ಗೌರವ ಮತ್ತು ಘನತೆ ಎತ್ತಿಹಿಡಿದಾಗ ಮಾತ್ರ ಉತ್ತಮ ಶಿಕ್ಷಣ ವ್ಯವಸ್ಥೆ ನಿರ್ಮಿಸಲು ಸಾಧ್ಯ.
>
> - ಎಸ್.ವಿ. ಸಂಕನೂರ, ವಿಧಾನ ಪರಿಷತ್ ಶಾಸಕ

ಶಾಲೆಗಳಲ್ಲಿ ಆನ್‌ಲೈನ್ ಹಾಗೂ ಡಿಜಿಟಲ್ ಕಾರ್ಯಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕಂಪ್ಯೂಟರ್ ಅಥವಾ ಡೇಟಾ ಎಂಟ್ರಿ ಆಪರೇಟರ್‌ಗಳಂತಹ ಸಹಾಯಕ ಸಿಬ್ಬಂದಿ ಒದಗಿಸುವ ಕುರಿತು ಸರ್ಕಾರ ಗಮನಹರಿಸಬೇಕು. ಇದರಿಂದ ಶಿಕ್ಷಕರು ಬೋಧನೆ, ವಿದ್ಯಾರ್ಥಿಗಳ ಮಾರ್ಗದರ್ಶನ ಹಾಗೂ ಕಲಿಕಾ ಚಟುವಟಿಕೆಗಳಿಗೆ ಹೆಚ್ಚಿನ ಸಮಯ ನೀಡಲು ಸಾಧ್ಯವಾಗುತ್ತದೆ ಎಂದರು.

ಕನ್ನಡದ ಜತೆಗೆ ಇಂಗ್ಲಿಷ್‌ನಲ್ಲಿಯೂ ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ಅವಕಾಶ ಕಲ್ಪಿಸಲು ದ್ವಿಭಾಷಾ ಬೋಧನಾ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ವರ್ಷದವರೆಗೆ ಹಂತ ಹಂತವಾಗಿ ತರಬೇತಿ ನೀಡಿದರೆ ಆತ್ಮವಿಶ್ವಾಸದಿಂದ ದ್ವಿಭಾಷಾ ಬೋಧನೆ ನಡೆಸಲು ಅನುಕೂಲವಾಗಲಿದೆ ಎಂದು ಸಲಹೆ ನೀಡಿದರು.

ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜೀವನ, ಜ್ಞಾನ, ಸರಳತೆ ಹಾಗೂ ನಿರಂತರ ಕಲಿಕೆಯ ಮನೋಭಾವ ಪ್ರತಿಯೊಬ್ಬ ಶಿಕ್ಷಕರಿಗೂ ಪ್ರೇರಣೆಯಾಗಬೇಕು. ಉಪನ್ಯಾಸಕರಾಗಿ ವೃತ್ತಿ ಆರಂಭಿಸಿ, ವಿಶ್ವವಿದ್ಯಾಲಯದ ಕುಲಪತಿ, ಉಪರಾಷ್ಟ್ರಪತಿ ಹಾಗೂ ರಾಷ್ಟ್ರಪತಿ ಹುದ್ದೆಗೇರಿದ ಅವರ ಜೀವನ ಶಿಕ್ಷಕರಿಗೆ ಆದರ್ಶವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಿ ಶಿಕ್ಷಕರನ್ನು ಗೌರವಿಸಲಾಯಿತು. ನಿವೃತ್ತ ಶಿಕ್ಷಕರನ್ನೂ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ವಿ. ಬಳ್ಳಾರಿ, ನಿವೃತ್ತ ಶಿಕ್ಷಕ ಎಸ್.ಎನ್. ಬಳ್ಳಾರಿ ಸೇರಿದಂತೆ ಇಲಾಖೆ ಅಧಿಕಾರಿಗಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು. ಕೆ.ಡಿ. ಬಡಿಗೇರ ಸ್ವಾಗತಿಸಿದರು. ಎಂ.ಎಂ. ಮೇಗಲಮನಿ ನಿರೂಪಿಸಿ, ವಂದಿಸಿದರು.

---

### ಶಿರಹಟ್ಟಿ ಪ್ರಜಾಸೇವಾ ಆಂದೋಲನದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಖಡಕ್ ಎಚ್ಚರಿಕೆ

# ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರದಿದ್ದರೆ ಸಿಎಂಗೆ ವರದಿ



### 165ಕ್ಕೂ ಹೆಚ್ಚು ಅರ್ಜಿ ಸ್ವೀಕಾರ

ಮಧ್ಯಾಹ್ನ 3.30ರವರೆಗೆ 165ಕ್ಕೂ ಹೆಚ್ಚು ಅರ್ಜಿಗಳು ಸ್ವೀಕೃತವಾಗಿದ್ದು, ಅವುಗಳನ್ನು ಐಪಿಜಿಆರ್‌ಎಸ್ ಮೂಲಕ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳ ಲಾಗಿನ್‌ಗೆ ಕಳುಹಿಸಲಾಗಿದೆ. ಅರ್ಜಿದಾರರಿಗೆ ಆನ್‌ಲೈನ್ ಹಾಗೂ ಆಫ್‌ಲೈನ್ ಮೂಲಕ ಉತ್ತರ ನೀಡಲಾಗುವುದು ಎಂದು ತಹಸೀಲ್ದಾರ್ ಕೆ. ರಾಘವೇಂದ್ರರಾವ್ ತಿಳಿಸಿದರು.

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕು ಮಟ್ಟದ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿ ವಾಸ್ತವ್ಯ ಮಾಡದೇ, ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದರೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಉನ್ನತ ಅಧಿಕಾರಿಗಳಿಗೆ ಅಧಿಕೃತ ಠರಾವು ಮೂಲಕ ವರದಿ ಸಲ್ಲಿಸಲಾಗುವುದು ಎಂದು ಶಾಸಕ ಡಾ. ಚಂದ್ರು ಲಮಾಣಿ ಎಚ್ಚರಿಕೆ ನೀಡಿದರು.

ಶನಿವಾರ ತಾಲೂಕು ಆಡಳಿತ ಹಾಗೂ ತಾಲೂಕು ಪಂಚಾಯಿತಿ ವತಿಯಿಂದ ಆಯೋಜಿಸಿದ್ದ ಪ್ರಜಾಸೇವಾ ಆಂದೋಲನದ ಅಧ್ಯಕ್ಷತೆ ವಹಿಸಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳ ನಿರ್ದೇಶನದಂತೆ ತಾಲೂಕು ಮಟ್ಟದ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿಯೇ ವಾಸ್ತವ್ಯ ಮಾಡಬೇಕು. ಇದನ್ನು ಖಚಿತಪಡಿಸಲು ಜಿಪಿಎಸ್ ಫೋಟೋ ಹಾಕಬೇಕು. ಕೇಂದ್ರಸ್ಥಾನದಲ್ಲಿ ವಾಸ್ತವ್ಯ ಮಾಡದ ಅಧಿಕಾರಿಗಳು ಕೂಡಲೇ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದರು.

**ಬೆಳಗಿನ ಜಾವವೇ ಸಾರಾಯಿ ಮಾರಾಟ?**

ಶಿರಹಟ್ಟಿ ಪಟ್ಟಣದ ಕೆಲ ಅಂಗಡಿಗಳಲ್ಲಿ ಬೆಳಗಿನ ಜಾವ 4 ಗಂಟೆಗೇ ಅಕ್ರಮವಾಗಿ ಸಾರಾಯಿ ಮಾರಾಟವಾಗುತ್ತಿರುವ ಬಗ್ಗೆ ದೂರುಗಳು ಬಂದಿವೆ. “ಚಹಾ ಸಿಗುವುದಿಲ್ಲ, ಆದರೆ ಸಾರಾಯಿ ಸಿಗುತ್ತದೆ. ಇದರಿಂದ ವಿದ್ಯಾರ್ಥಿನಿಯರಿಗೆ ಕಿರುಕುಳ ನೀಡುವ ಘಟನೆಗಳೂ ನಡೆಯುತ್ತಿವೆ” ಎಂದು ಅಸಮಾಧಾನ ವ್ಯಕ್ತಪಡಿಸಿದ ಶಾಸಕ ಲಮಾಣಿ, ಅಕ್ರಮ ಸಾರಾಯಿ ಮಾರಾಟಕ್ಕೆ ಕಡಿವಾಣ ಹಾಕುವಂತೆ ಸೂಚಿಸಿದರು.

ಸಭೆಗೆ ಗೈರುಹಾಜರಾಗಿದ್ದ ಅಬಕಾರಿ ಪೊಲೀಸ್ ಇನ್‌ಸ್ಪೆಕ್ಟರ್ ವಿರುದ್ಧ ಕ್ರಮಕ್ಕೆ ವರದಿ ಸಲ್ಲಿಸುವಂತೆ ತಹಸೀಲ್ದಾರ್ ಕೆ. ರಾಘವೇಂದ್ರರಾವ್ ಹಾಗೂ ಸಿಪಿಐ ಬಿ.ವಿ. ನ್ಯಾಮಗೌಡ ಅವರಿಗೆ ಸೂಚಿಸಿದರು.

**ಎಪಿಎಂಸಿ ಸ್ವಚ್ಛಗೊಳಿಸಿ, ಬೀದಿ ವ್ಯಾಪಾರಿಗಳಿಗೆ ವ್ಯವಸ್ಥೆ**

ಶಿರಹಟ್ಟಿ ಸರ್ಕಾರಿ ಶಾಲೆ ಸುತ್ತಮುತ್ತ ಒತ್ತುವರಿಯಾಗಿದ್ದ ಅಂಗಡಿಗಳನ್ನು ತೆರವುಗೊಳಿಸಲಾಗಿದ್ದು, ಬಸ್ ನಿಲ್ದಾಣದ ಸಮೀಪದ ಬೀದಿ ವ್ಯಾಪಾರದಿಂದ ಸಾರ್ವಜನಿಕರು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಎಪಿಎಂಸಿ ಆವರಣವನ್ನು ಸ್ವಚ್ಛಗೊಳಿಸಿ, ಬೀದಿ ವ್ಯಾಪಾರಿಗಳಿಗೆ ಒಂದು ವಾರದೊಳಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಪಪಂ ಮುಖ್ಯಾಧಿಕಾರಿಗೆ ಶಾಸಕ ಲಮಾಣಿ ಸೂಚಿಸಿದರು.

**ಫುಡ್ ಇಲ್ಲದಿದ್ದರೂ ಇಂದಿರಾ ಕ್ಯಾಂಟೀನ್‌ಗೆ ಬಿಲ್?**

ಇಂದಿರಾ ಕ್ಯಾಂಟೀನ್‌ನಲ್ಲಿ ಕಳೆದ ಮೂರು ವರ್ಷಗಳಿಂದ ಆಹಾರ ಸಿಗದಿದ್ದರೂ ಪ್ರತಿ ತಿಂಗಳು ಬಿಲ್ ಮಾಡಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ?5ಕ್ಕೆ ನೀಡುವ ಆಹಾರಕ್ಕೆ ಸರ್ಕಾರ ?26 ಪಾವತಿಸುತ್ತಿದ್ದು, ಸಾರ್ವಜನಿಕರಿಗೆ ಸಮರ್ಪಕ ಆಹಾರ ಸಿಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಪಪಂ ಮುಖ್ಯಾಧಿಕಾರಿಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ತಾಪಂ ಇಒ ಆರ್.ವಿ. ದೊಡ್ಡಮನಿ, ಸಿಪಿಐ ಬಿ.ವಿ. ನ್ಯಾಮಗೌಡ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ, ಪಪಂ ಮುಖ್ಯಾಧಿಕಾರಿ ನೀಲೇಶ ಹಾದಿಮನಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

---

# ಖಾಲಿ ಇರುವ ವಕ್ಫ್ ಮಂಡಳಿ ಅಧ್ಯಕ್ಷರ ಹುದ್ದೆಗೆ ತಕ್ಷಣ ನೇಮಕ ಮಾಡಲು ಒತ್ತಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಕ್ಫ್ ಮಂಡಳಿಯ ಅಧ್ಯಕ್ಷರ ಹುದ್ದೆ ಸುಮಾರು ಎರಡು ವರ್ಷಗಳಿಂದ ಖಾಲಿ ಇರುವ ಹಿನ್ನೆಲೆಯಲ್ಲಿ, ಅರ್ಹ ಹಾಗೂ ಸಮರ್ಥ ವ್ಯಕ್ತಿಯನ್ನು ತಕ್ಷಣ ಅಧ್ಯಕ್ಷರನ್ನಾಗಿ ನೇಮಕ ಮಾಡಬೇಕು ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಜಿಲ್ಲಾಧ್ಯಕ್ಷ ಜಾಫರ್ ಡಾಲಾಯತ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ವಕ್ಫ್ ಮಂಡಳಿಗೆ ಪೂರ್ಣ ಪ್ರಮಾಣದ ನಾಯಕತ್ವದ ಕೊರತೆಯಿಂದಾಗಿ ವಕ್ಫ್ ಆಸ್ತಿಗಳ ಸಂರಕ್ಷಣೆ, ನಿರ್ವಹಣೆ ಹಾಗೂ ಅಭಿವೃದ್ಧಿ ಸೇರಿದಂತೆ ಹಲವು ಆಡಳಿತಾತ್ಮಕ ಕಾರ್ಯಗಳಿಗೆ ಹಿನ್ನಡೆಯಾಗುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿರುವ ವಕ್ಫ್ ಆಸ್ತಿಗಳು ಧಾರ್ಮಿಕ, ಸಾಮಾಜಿಕ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ಪ್ರಮುಖ ಆಸ್ತಿಗಳಾಗಿವೆ. ಅವುಗಳ ಸಮರ್ಪಕ ನಿರ್ವಹಣೆ ಮತ್ತು ಸಂರಕ್ಷಣೆಗೆ ಜವಾಬ್ದಾರಿಯುತ ನಾಯಕತ್ವ ಅಗತ್ಯವಿದೆ. ದಾಖಲೆಗಳ ನಿರ್ವಹಣೆ, ಆಸ್ತಿಗಳ ಸಂರಕ್ಷಣೆ, ಒತ್ತುವರಿ ತಡೆ ಹಾಗೂ ತೆರವು, ಅಭಿವೃದ್ಧಿ ಕಾರ್ಯಗಳು ಮತ್ತು ಸಾರ್ವಜನಿಕರಿಂದ ಸಲ್ಲಿಕೆಯಾಗುವ ಮನವಿಗಳ ಕುರಿತು ಪರಿಣಾಮಕಾರಿ ಕ್ರಮ ಕೈಗೊಳ್ಳಲು ಅಧ್ಯಕ್ಷರ ನೇಮಕ ಅನಿವಾರ್ಯವಾಗಿದೆ ಎಂದು ಹೇಳಿದರು.




ರಿಯಾಜಹಮ್ಮದ್ ದೊಡ್ಡಮನಿ ಮಾತನಾಡಿ, ಅಧ್ಯಕ್ಷರ ನೇಮಕದ ಬಳಿಕ ಗದಗ ಜಿಲ್ಲೆಯಲ್ಲಿರುವ ವಕ್ಫ್ ಆಸ್ತಿಗಳ ಸಮಗ್ರ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಬೇಕು. ಅಕ್ರಮವಾಗಿ ಒತ್ತುವರಿ ಮಾಡಲಾಗಿರುವ ವಕ್ಫ್ ಆಸ್ತಿಗಳನ್ನು ಗುರುತಿಸಿ, ಕಾನೂನುಬದ್ಧವಾಗಿ ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ವಕ್ಫ್ ಆಸ್ತಿಗಳ ಅಭಿವೃದ್ಧಿಗೆ ಆದ್ಯತೆ ನೀಡಿ, ಅವುಗಳಿಂದ ಸಮುದಾಯ ಹಾಗೂ ಸಾರ್ವಜನಿಕರಿಗೆ ದೊರೆಯಬೇಕಾದ ಪ್ರಯೋಜನಗಳು ಸಮರ್ಪಕವಾಗಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಸೈಯದ್ ಜಹೀರುದ್ದೀನ್ ಪೀರಜಾದೆ, ಕುತ್ಬುದ್ದೀನ್ ಶೇಖ್, ಡಾ. ಅಬ್ದುಲ್ ರಜಾಕ್ ಮಂಗಳೂರು, ಮಹಬೂಬ್ ಭಾಷಾ ಖಾಜಿ, ನಿಜಾಮುದ್ದೀನ್ ಕಾಟಾಪುರ, ಮಹಮ್ಮದ್ ಸಲೀಂ ಕರಡಿ ಹಾಗೂ ರಿಯಾಜ್ ಅಹ್ಮದ್ ಈಟಿ ಇದ್ದರು.

### ‘ನನ್ನ ಆದರ್ಶ ವ್ಯಕ್ತಿಗೊಂದು ಪತ್ರ’ ಸ್ಪರ್ಧೆಯಲ್ಲಿ ಗಮನಾರ್ಹ ಸಾಧನೆ

# ಪೆನ್ನು ಹಿಡಿದು ವಲಯ ಮಟ್ಟದಲ್ಲಿ ಮಿಂಚಿದ ಶ್ರಾವಣಿ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಡಿಜಿಟಲ್ ಯುಗದ ಭರಾಟೆಯ ನಡುವೆಯೂ ಪೆನ್ನು–ಪೇಪರ್‌ನೊಂದಿಗೆ ಭಾವನೆಗಳನ್ನು ಅಕ್ಷರ ರೂಪಕ್ಕಿಳಿಸುವ ಕಲೆ ತನ್ನ ಮಹತ್ವವನ್ನು ಕಳೆದುಕೊಂಡಿಲ್ಲ ಎಂಬುದನ್ನು ವಿದ್ಯಾರ್ಥಿನಿ ಶ್ರಾವಣಿ ಕರಿಗಾರ ಸಾಧನೆ ಮತ್ತೊಮ್ಮೆ ಸಾಬೀತುಪಡಿಸಿದೆ.

ಭಾರತೀಯ ಅಂಚೆ ಇಲಾಖೆ ಆಯೋಜಿಸಿದ್ದ ರಾಷ್ಟ್ರೀಯ ಪತ್ರ ಬರೆಯುವ ಅಭಿಯಾನ 2025–26ರ ‘ನನ್ನ ಆದರ್ಶ ವ್ಯಕ್ತಿಗೊಂದು ಪತ್ರ’ ವಿಷಯದ ಪತ್ರ ಬರೆಯುವ ಸ್ಪರ್ಧೆಯಲ್ಲಿ ಮುಂಡರಗಿಯ ಜಗದ್ಗುರು ತೋಂಟದಾರ್ಯ ವಸತಿ ಸಿ.ಬಿ.ಎಸ್.ಇ. ಶಾಲೆಯ ವಿದ್ಯಾರ್ಥಿನಿ ಕುಮಾರಿ ಶ್ರಾವಣಿ ಕರಿಗಾರ ವಲಯ ಮಟ್ಟದಲ್ಲಿ ಪ್ರಶಸ್ತಿ ಪಡೆದು ಗಮನ ಸೆಳೆದಿದ್ದಾರೆ. ಅವರ ಸಾಧನೆಯನ್ನು ಗುರುತಿಸಿ ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಿರಹಟ್ಟಿ, ವಿದ್ಯಾರ್ಥಿಗಳಲ್ಲಿ ಬರವಣಿಗೆಯ ಅಭ್ಯಾಸ, ಸೃಜನಶೀಲತೆ ಹಾಗೂ ಸಂವಹನ ಕೌಶಲ್ಯ ಬೆಳೆಸುವ ನಿಟ್ಟಿನಲ್ಲಿ ಅಂಚೆ ಇಲಾಖೆ ವಿವಿಧ ಪತ್ರ ಬರೆಯುವ ಸ್ಪರ್ಧೆಗಳನ್ನು ಆಯೋಜಿಸುತ್ತಿದೆ. ತಂತ್ರಜ್ಞಾನದ ಬಳಕೆ ಹೆಚ್ಚುತ್ತಿರುವ ಸಂದರ್ಭದಲ್ಲಿ ಕೈಬರಹದ ಅಭ್ಯಾಸವನ್ನು ಮುಂದುವರಿಸುವುದು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೂ ಸಹಕಾರಿಯಾಗಲಿದೆ ಎಂದರು.

ಅಂಚೆ ಇಲಾಖೆಯ ದೀನ್ ದಯಾಳ್ ಸ್ಪರ್ಶ ಯೋಜನೆಯಡಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಪರೀಕ್ಷೆ ನಡೆಸಲಾಗುತ್ತಿದ್ದು, ಅರ್ಹತೆ ಪಡೆದವರಿಗೆ ಪ್ರತಿವರ್ಷ ?6,000 ಪ್ರೋತ್ಸಾಹಧನ ನೀಡಲಾಗುತ್ತದೆ. ವಿದ್ಯಾರ್ಥಿಗಳು ಅಂಚೆ ಇಲಾಖೆಯ ವಿವಿಧ ಉಳಿತಾಯ ಹಾಗೂ ಜನೋಪಯೋಗಿ ಯೋಜನೆಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಅಂಚೆ ಜೀವ ವಿಮಾ ಅಧಿಕಾರಿ ಎಸ್.ಐ. ನಾಯ್ಕ ಮಾತನಾಡಿ, 18 ವರ್ಷ ಮೇಲ್ಪಟ್ಟವರ ವಿಭಾಗದಲ್ಲಿ ಗದಗ ನಗರದ ಎ.ಎಸ್.ಎಸ್. ಕಾಮರ್ಸ್ ಕಾಲೇಜಿನ ವಿದ್ಯಾರ್ಥಿನಿ ಕುಮಾರಿ ಶ್ವೇತಾ ಸಿ. ಶಿರೂರ ಪ್ರಥಮ ಸ್ಥಾನ ಪಡೆದು ?25,000 ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ಪಡೆದಿರುವುದನ್ನು ತಿಳಿಸಿದರು. ಜಿಲ್ಲೆಯ ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳಲ್ಲಿ ಸಾಧನೆ ಮಾಡುವ ಮೂಲಕ ಜಿಲ್ಲೆಯ ಕೀರ್ತಿಯನ್ನು ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚಿಸುತ್ತಿದ್ದಾರೆ ಎಂದರು.ಮುಂಡರಗಿ ಅಂಚೆ ಕಚೇರಿಯ ಅಂಚೆ ಪಾಲಕ ಹಾಲಪ್ಪ ವಾಮಕೆರಿ, ಶಾಲೆಯ ಪ್ರಾಚಾರ್ಯ ಶರಣಕುಮಾರ ಬುಗಟಿ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> **ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಗುರುತಿಸಿ, ಅದಕ್ಕೆ ಸೂಕ್ತ ವೇದಿಕೆ ಕಲ್ಪಿಸುವುದು ಇಂತಹ ಸ್ಪರ್ಧೆಗಳ ಮುಖ್ಯ ಉದ್ದೇಶ. ಶ್ರಾವಣಿಯಂತಹ ವಿದ್ಯಾರ್ಥಿಗಳ ಸಾಧನೆ ಇತರರಿಗೂ ಪ್ರೇರಣೆಯಾಗಲಿ.**
>
> **- ಎಸ್.ಎಸ್. ಶಿರಹಟ್ಟಿ, ವಿಭಾಗೀಯ ಅಂಚೆ ಅಧೀಕ್ಷಕ, ಗದಗ**

### ಹಕ್ಕುಪತ್ರ ಪಡೆದ ನೂರಾರು ಬಡ ಕುಟುಂಬಗಳ ಪರದಾಟ!

# 13 ವರ್ಷ ಕಳೆದರೂ ನಿವೇಶನ ಇಲ್ಲ!



**ವಿಜಯಸಾಕ್ಷಿ ಸುದ್ದಿ, ರೋಣ**

ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿ ಹಕ್ಕುಪತ್ರ ಪಡೆದಿದ್ದರೂ ಕಳೆದ ಸುಮಾರು 13 ವರ್ಷಗಳಿಂದ ನಿವೇಶನ ಹಂಚಿಕೆಯಾಗದೆ ನೂರಾರು ಬಡ ಕುಟುಂಬಗಳು ಸಂಕಷ್ಟದಲ್ಲಿದ್ದು, ಕೂಡಲೇ ಅರ್ಹ ಫಲಾನುಭವಿಗಳಿಗೆ ನಿವೇಶನ ಹಾಗೂ ವಸತಿ ಸೌಲಭ್ಯ ಕಲ್ಪಿಸಬೇಕೆಂದು ರೋಣ ತಾಲೂಕು ಸ್ಲಂ ಸಮಿತಿ ಆಗ್ರಹಿಸಿದೆ.

ಸ್ಲಂ ಜನಾಂದೋಲನ–ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿಯ ಸಹಕಾರದಲ್ಲಿ ರೋಣ ತಾಲೂಕು ಸ್ಲಂ ಸಮಿತಿ ನೇತೃತ್ವದಲ್ಲಿ ನೂರಾರು ನಿವಾಸಿಗಳು ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು. ರೋಣ ಪಟ್ಟಣದಲ್ಲಿ 2013ರಲ್ಲಿ ನೂರಾರು ಬಡ ಹಾಗೂ ಕೂಲಿ ಕಾರ್ಮಿಕ ಕುಟುಂಬಗಳು ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ್ದವು. ಅರ್ಜಿಗಳನ್ನು ಪರಿಶೀಲಿಸಿದ ಬಳಿಕ ಅಂದಿನ ತಹಶೀಲ್ದಾರ್ ಅವರು ದಿನಾಂಕ 7–2–2013ರಂದು ಫಲಾನುಭವಿಗಳಿಗೆ ನಿವೇಶನ ಹಕ್ಕುಪತ್ರ ವಿತರಿಸಿದ್ದರು.

**ಹಕ್ಕುಪತ್ರವಿದೆ; ನಿವೇಶನದ ಜಾಗವೇ ಗೊತ್ತಿಲ್ಲ!**

ಹಕ್ಕುಪತ್ರಗಳಲ್ಲಿ ರೋಣ ಪಟ್ಟಣದ ಯಾವ ಸರ್ವೆ ಸಂಖ್ಯೆಯಲ್ಲಿ ನಿವೇಶನ ಮಂಜೂರು ಮಾಡಲಾಗಿದೆ ಎಂಬ ವಿವರ ನಮೂದಿಸದಿರುವುದರಿಂದ ಫಲಾನುಭವಿಗಳು ಗೊಂದಲಕ್ಕೆ ಸಿಲುಕಿದ್ದಾರೆ. ಗುಡಿಸಲು ಪ್ರದೇಶಗಳು ಹಾಗೂ ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿರುವ ಅನೇಕ ಕುಟುಂಬಗಳು ವಸತಿ ಸೌಲಭ್ಯಕ್ಕಾಗಿ ದಶಕಗಳಿಂದ ಕಾಯುತ್ತಿವೆ ಎಂದು ತಾಲೂಕು ಸ್ಲಂ ಸಮಿತಿ ಅಧ್ಯಕ್ಷ ಬಸವರಾಜ ಕುರಿ ತಿಳಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, ರೋಣ ಪಟ್ಟಣದಲ್ಲಿ ಹಲವು ದಶಕಗಳಿಂದ ಸರ್ಕಾರಿ ಹಾಗೂ ಖಾಸಗಿ ಜಾಗಗಳಲ್ಲಿ ಗುಡಿಸಲು ನಿರ್ಮಿಸಿಕೊಂಡು ನೂರಾರು ಕುಟುಂಬಗಳು ವಾಸಿಸುತ್ತಿವೆ. ಈ ಪ್ರದೇಶಗಳನ್ನು ಕರ್ನಾಟಕ ಸ್ಲಂ ಕಾಯ್ದೆ–1973ರ ಅಡಿಯಲ್ಲಿ ಗುರುತಿಸಿ ಅಗತ್ಯ ವಸತಿ ಹಾಗೂ ಮೂಲಸೌಕರ್ಯ ಕಲ್ಪಿಸುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದರು.

ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಅರ್ಜಿ ಸಲ್ಲಿಸಿರುವ ಅರ್ಹ ಕುಟುಂಬಗಳಿಗೂ ಶೀಘ್ರ ನಿವೇಶನ ಹಾಗೂ ವಸತಿ ಸೌಲಭ್ಯ ಕಲ್ಪಿಸಬೇಕು. ಬೇಡಿಕೆಗಳನ್ನು ನಿರ್ಲಕ್ಷಿಸಿದರೆ ನೂರಾರು ನಿವಾಸಿಗಳೊಂದಿಗೆ ತಹಶೀಲ್ದಾರ್ ಕಚೇರಿ ಎದುರು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಮನವಿ ಮೂಲಕ ಎಚ್ಚರಿಸಲಾಗಿದೆ.

ಈ ಸಂದರ್ಭದಲ್ಲಿ ಎಂ.ಬಿ. ನದಾಫ್, ಪರವೀನಬಾನು ಹವಾಲ್ದಾರ, ಮೌಲಾಸಾಬ ಗಚ್ಚಿ, ಪುಷ್ಪಾ ಬಿಜಾಪೂರ, ಆರೀಫ್ ಕಾಗದಗಾರ, ಆಯಿಶಾ ನದಾಫ್, ರೆಹಮಾನಬಿ ಕೊಲಕಾರ, ಭಾಗ್ಯಬಾಳವ್ವ ಗುಣ್ಣದ, ಶಮೀದಅಲಿ ಚೌಧರಿ, ಮಾಳಮ್ಮ ಮಾದರ, ಆಶೀಫ್ ನಾಲಬಂದ, ತೌಶೀಫ್ ಮುಲ್ಲಾ ಸೇರಿದಂತೆ ವಿವಿಧ ಸ್ಲಂ ಪ್ರದೇಶಗಳ ನೂರಾರು ನಿವಾಸಿಗಳು ಉಪಸ್ಥಿತರಿದ್ದರು.

> **ಹಕ್ಕುಪತ್ರ ನೀಡಿ 13 ವರ್ಷಗಳಾದರೂ ನಿವೇಶನ ಹಂಚಿಕೆ ಮಾಡದಿರುವುದು ಬಡ ಕುಟುಂಬಗಳಿಗೆ ಮಾಡಿದ ಅನ್ಯಾಯವಾಗಿದೆ. ಅಧಿಕಾರಿಗಳು ತಕ್ಷಣ ಸಮಸ್ಯೆ ಬಗೆಹರಿಸಿ ಅರ್ಹರಿಗೆ ನಿವೇಶನ ಹಾಗೂ ವಸತಿ ಸೌಲಭ್ಯ ಕಲ್ಪಿಸಬೇಕು.**
>
> **- ಇಮ್ತಿಯಾಜ್ ಆರ್. ಮಾನ್ವಿ, ಅಧ್ಯಕ್ಷರು, ಗದಗ ಜಿಲ್ಲಾ ಸ್ಲಂ ಸಮಿತಿ**

### ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಉದ್ಘಾಟನೆ; ಪ್ರತಿದಿನ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮ

# ಸೆ. 7ರಿಂದ ವರವಿಯಲ್ಲಿ ಮೌನೇಶ್ವರ ಜಾತ್ರಾಮಹೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಶಿರಹಟ್ಟಿ ತಾಲೂಕಿನ ವರವಿ ಪುಣ್ಯಕ್ಷೇತ್ರದ ಶ್ರೀ ಜಗದ್ಗುರು ಮೌನೇಶ್ವರರ ಜಾತ್ರಾಮಹೋತ್ಸವ ಸೆ. 7ರಿಂದ 11ರವರೆಗೆ ಶ್ರದ್ಧಾ–ಭಕ್ತಿಯಿಂದ ಹಾಗೂ ವಿಜೃಂಭಣೆಯಿಂದ ನಡೆಯಲಿದೆ ಎಂದು ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ಸಿ. ನರಗುಂದ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ. 7ರಂದು ಬೆಳಗ್ಗೆ ಧ್ವಜಾರೋಹಣ ಹಾಗೂ ಮಹಾಯಜ್ಞ, ಮಧ್ಯಾಹ್ನ 12.15ಕ್ಕೆ ಜಾತ್ರಾಮಹೋತ್ಸವ ಉದ್ಘಾಟನೆ, ಸಂಜೆ 5.15ಕ್ಕೆ ಮಹಾರಥೋತ್ಸವ ನಡೆಯಲಿದೆ. ಸೆ. 8ರಂದು ಕಡುಬಿನ ಕಾಳಗ, ಸೆ. 9ರಂದು ಸಾಮೂಹಿಕ ಉಪನಯನ, ಸೆ. 10ರಂದು ಪಾಲಕಿ ಅಲಾವಿ ಗುಡ್ಡಕ್ಕೆ ತೆರಳುವ ಕಾರ್ಯಕ್ರಮ ಹಾಗೂ ಸೆ. 11ರಂದು ಮಹಾಪ್ರಸಾದ, ಪ್ರವಚನ, ಸಮಾರೋಪ, ದಾನಿಗಳಿಗೆ ಸನ್ಮಾನ ಮತ್ತು ಪೂಜಾಫಲ ಲಿಲಾವು ನಡೆಯಲಿದೆ. ಪ್ರತಿದಿನ ರಾತ್ರಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ ಎಂದರು.

ಸೆ. 7ರ ಉದ್ಘಾಟನಾ ಸಮಾರಂಭದ ಸಾನ್ನಿಧ್ಯವನ್ನು ಶ್ರೀ ಮೌನೇಶ್ವರ ಮಹಾಸ್ವಾಮಿಗಳು ವಹಿಸಲಿದ್ದು, ಮೋಹನ ಸಿ. ನರಗುಂದ ಅಧ್ಯಕ್ಷತೆ ವಹಿಸುವರು. ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸುವರು. ಶಾಸಕರಾದ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಗಂಗಣ್ಣ ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಜಿಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಉಪ ವಿಭಾಗಾಧಿಕಾರಿ ಎಂ. ಗಂಗಪ್ಪ, ತಹಶೀಲ್ದಾರ ಕೆ. ರಾಘವೇಂದ್ರರಾವ್, ಡಿಎಸ್‌ಪಿ ಮರ್ತುಜಾ ಖಾದ್ರಿ, ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ಈರಪ್ಪ ರಿತ್ತಿ ಸೇರಿದಂತೆ ಗಣ್ಯರು ಭಾಗವಹಿಸುವರು.





ಜಾತ್ರಾಮಹೋತ್ಸವದ ಮಹತ್ವ ಕುರಿತು ಮಾತನಾಡಿದ ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ, ಮೌನೇಶ್ವರರು ಧರ್ಮ ಜಾಗೃತಿ ಹಾಗೂ ಭಾವೈಕ್ಯತೆಯ ಸಂದೇಶ ಸಾರಿದ ಮಹಾತ್ಮರಾಗಿದ್ದು, ವರವಿ ಅವರ ಪ್ರಮುಖ ಪುಣ್ಯಕ್ಷೇತ್ರಗಳಲ್ಲಿ ಒಂದಾಗಿದೆ. ಜಾತ್ರೆಯಲ್ಲಿ ಸರ್ವರೂ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಸೆ. 11ರ ಸಮಾರೋಪ ಸಮಾರಂಭದ ಸಾನ್ನಿಧ್ಯವನ್ನು ಶ್ರೀ ಮೌನೇಶ್ವರ ಮಹಾಸ್ವಾಮಿಗಳು, ಶ್ರೀ ಫಕ್ಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಹಾಗೂ ಶ್ರೀ ಶಿವಕುಮಾರ ಮಹಾಸ್ವಾಮಿಗಳು ವಹಿಸುವರು. ಡಾ. ಎಚ್. ಕೆ. ಪಾಟೀಲ ಘನ ಉಪಸ್ಥಿತರಿರುವರು. ಸಚಿವ ಬಸವರಾಜ ರಾಯರಡ್ಡಿ ಉದ್ಘಾಟಿಸುವರು. ಸಚಿವ ಕೆ.ಎಸ್. ಬಸವಂತಪ್ಪ ಗೌರವ ಉಪಸ್ಥಿತರಿರುವರು ಎಂದು ಟ್ರಸ್ಟ್‌ನ ಕೋಶಾಧ್ಯಕ್ಷ ಚಂದ್ರಕಾಂತ ಸೋನಾರ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶ್ರೀಧರ ಕೊಣ್ಣೂರ, ಮೌನೇಶ ಸಿ. ಬಡಿಗೇರ, ಉಮೇಶ ಅಕ್ಕಸಾಲಿ, ವೀರಣ್ಣ ಹಲವಾಗಲಿ, ನಾಗರಾಜ ಕಮ್ಮಾರ, ಶಂಕರಾಚಾರ್ಯರ ಪತ್ತಾರ ಹಾಗೂ ಈರಣ್ಣ ಪತ್ತಾರ ಉಪಸ್ಥಿತರಿದ್ದರು.

# ನಿಶ್ಯಬ್ದದ ಬದುಕಿನ ಮಹಾ ಬೆಳಕು ಪೂಜ್ಯ ಶ್ರೀ ಸಿದ್ಧೇಶ್ವರ ಅಪ್ಪಾಜಿ



ವಿಜಯಪುರದ ಜ್ಞಾನಯೋಗಾಶ್ರಮದ ಪೂಜ್ಯ ಶ್ರೀ ಸಿದ್ಧೇಶ್ವರ ಅಪ್ಪಾಜಿಯವರ ಬದುಕೇ ಒಂದು ನಿಶ್ಯಬ್ದ. ಆ ನಿಶ್ಯಬ್ದವನ್ನು ಶಬ್ದಗಳಲ್ಲಿ ಕಟ್ಟಿಕೊಡುವುದು ಅಸಾಧ್ಯ; ಕಟ್ಟಿಕೊಟ್ಟರೂ ಅದು ಅಪೂರ್ಣವೇ. ಏಕೆಂದರೆ ಅವರ ಬದುಕು ಪದಗಳಿಗೆ ನಿಲುಕದಷ್ಟು ವಿಶಾಲ, ವಿವರಣೆಗೆ ಸಿಗದಷ್ಟು ಆಳ ಹಾಗೂ ಅನುಭವಿಸಿದವರಿಗೆ ಮಾತ್ರ ಅರಿವಾಗುವಷ್ಟು ಆತ್ಮೀಯ.

ಭೂಮಾತೆಯ ಮಡಿಲಲ್ಲಿ ತಮ್ಮ ಶುಭ್ರ ಛಾಯೆಯನ್ನು ಬಿಟ್ಟುಹೋದ ಅನೇಕ ಪುಣ್ಯಾತ್ಮರ ಕುರಿತು ನಾವು ಕೇಳಿದ್ದೇವೆ, ಓದಿದ್ದೇವೆ; ಕೆಲವರನ್ನು ಪ್ರತ್ಯಕ್ಷವಾಗಿ ಕಂಡಿದ್ದೇವೆ. ಆದರೆ ಕೆಲವರು ಯಾವುದೇ ಉಪಮೆಗೆ ನಿಲುಕದವರು. ಅಂತಹ ಮಹನೀಯರನ್ನು ಪರಮಾತ್ಮನೇ ಮನುಕುಲಕ್ಕೆ ಕೊಡುಗೆಯಾಗಿ ನೀಡುತ್ತಾನೆ. ಪೂಜ್ಯ ಸಿದ್ಧೇಶ್ವರ ಅಪ್ಪಾಜಿಯವರು ಅಂತಹ ಅಪರೂಪದ ಪುಣ್ಯಾತ್ಮರಲ್ಲಿ ಒಬ್ಬರು.

ಅವರನ್ನು ಶರಣರೆನ್ನಬಹುದು, ಸಂತರೆನ್ನಬಹುದು, ದಾಸರೆನ್ನಬಹುದು, ಜ್ಞಾನಿ ಅಥವಾ ಆಧ್ಯಾತ್ಮಿಕ ಚೇತನರೆನ್ನಬಹುದು. ಆದರೆ ಈ ಪ್ರತಿಯೊಂದು ಪದವೂ ಅವರ ವ್ಯಕ್ತಿತ್ವದ ಒಂದು ಮುಖವನ್ನು ಮಾತ್ರ ಪರಿಚಯಿಸುತ್ತದೆ. ಈ ಎಲ್ಲ ಗುಣಗಳನ್ನೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು, ಅವುಗಳನ್ನೂ ಮೀರಿದ ಸರಳ, ಸಜ್ಜನಿಕೆಯ ಹಾಗೂ ಶುಭ್ರ ಬದುಕನ್ನು ನಡೆಸಿದ ಅಪೂರ್ವ ವ್ಯಕ್ತಿತ್ವ ಅವರದು.

ಅವರ ಸರಳತೆಯೇ ಅವರ ವೈಭವ.

ಅವರ ಮೌನವೇ ಅವರ ಸಂದೇಶ.

ಅವರ ಜೀವನವೇ ಅವರ ಪ್ರವಚನ.

ಅವರ ನಡೆ–ನುಡಿಯೇ ಅವರ ತತ್ವಜ್ಞಾನ.

ದೊಡ್ಡ ದೊಡ್ಡ ಮಾತುಗಳಿಂದ ತಮ್ಮ ಮಹತ್ವವನ್ನು ಸಾರಲಿಲ್ಲ. ಬದಲಾಗಿ, ಬದುಕಿನ ಮೂಲಕವೇ ಮಹತ್ವವೆಂದರೇನು ಎಂಬುದನ್ನು ತೋರಿಸಿದರು. ಜ್ಞಾನವನ್ನು ಪ್ರದರ್ಶಿಸಲಿಲ್ಲ?ಹಂಚಿದರು. ಆಧ್ಯಾತ್ಮವನ್ನು ಕೇವಲ ಬೋಧಿಸಲಿಲ್ಲ?ಬದುಕಿದರು. ವೈರಾಗ್ಯವನ್ನು ವಿವರಿಸಲಿಲ್ಲ?ತಮ್ಮ ಜೀವನದಲ್ಲೇ ಸಾಕಾರಗೊಳಿಸಿದರು.

ಅವರ ಸನ್ನಿಧಿಯಲ್ಲಿ ಕುಳಿತಾಗ ಮನಸ್ಸನ್ನು ಆವರಿಸುತ್ತಿದ್ದ ನೆಮ್ಮದಿ ವಿಶಿಷ್ಟವಾದುದು. ಅವರ ಮಾತುಗಳು ಕಿವಿಗೆ ಬೀಳುವುದಕ್ಕಿಂತ ಮೊದಲು ಹೃದಯವನ್ನು ತಟ್ಟುತ್ತಿದ್ದವು. ಅತ್ಯಂತ ಸರಳವಾಗಿ ಮಾತನಾಡಿದರೂ, ಆ ಮಾತುಗಳ ಆಳವನ್ನು ಅರಿಯಲು ಕೆಲವೊಮ್ಮೆ ಇಡೀ ಬದುಕೇ ಬೇಕೆನಿಸುತ್ತಿತ್ತು.

ಅವರನ್ನು ನೋಡುವುದು ಒಂದು ಅನುಭವ.

ಅವರನ್ನು ಕೇಳುವುದು ಒಂದು ಪಾಠ.

ಅವರೊಂದಿಗೆ ಇರುವುದು ಒಂದು ಸೌಭಾಗ್ಯ.

ಅವರನ್ನು ಅರ್ಥಮಾಡಿಕೊಳ್ಳಲು ಪ್ರಯತ್ನಿಸುವುದು ಒಂದು ಆತ್ಮಯಾನ.

ಅಂತಹ ಮಹಾತ್ಮರ ಸನ್ನಿಧಿಯಲ್ಲಿ ಇದ್ದವರು ನಿಜಕ್ಕೂ ಸೌಭಾಗ್ಯಶಾಲಿಗಳು.

ಕಾಲ ಕಳೆಯುತ್ತದೆ. ದೇಹಗಳು ಮರೆಯಾಗುತ್ತವೆ. ಧ್ವನಿಗಳು ಮೌನವಾಗುತ್ತವೆ. ಆದರೆ ಕೆಲವು ವ್ಯಕ್ತಿತ್ವಗಳು ಮಾತ್ರ ಕಾಲವನ್ನು ಮೀರಿ ಉಳಿಯುತ್ತವೆ. ಏಕೆಂದರೆ ಅವರು ಬಿಟ್ಟುಹೋಗುವುದು ಕೇವಲ ನೆನಪುಗಳಲ್ಲ; ಒಂದು ಚಿಂತನೆ, ಒಂದು ದಾರಿ, ಒಂದು ಬೆಳಕು ಹಾಗೂ ಬದುಕಿನ ಮೌಲ್ಯ.

ಸಿದ್ಧೇಶ್ವರ ಅಪ್ಪಾಜಿಯವರು ಅಂತಹ ಬೆಳಕಿನ ಪಥಿಕರು. ಅವರ ಬದುಕನ್ನು ಬರೆಯಲು ಶಬ್ದಗಳು ಸಾಲವು. ಅವರ ವ್ಯಕ್ತಿತ್ವವನ್ನು ಅಳೆಯಲು ಅಳತೆಗೋಲು ಸಾಲದು. ಅವರ ಸರಳತೆಯನ್ನು ವರ್ಣಿಸಲು ವಿಶೇಷಣಗಳು ಸಾಲವು.

ಹೀಗಾಗಿ ಅವರ ಬದುಕಿನ ಮುಂದೆ ನಿಂತಾಗ ಪದಗಳೇ ಮೌನವಾಗುತ್ತವೆ. ಆ ಮೌನದಲ್ಲಿಯೇ ಅವರ ಮಹತ್ವವಿದೆ. ಆ ನಿಶ್ಯಬ್ದದಲ್ಲಿಯೇ ಅವರ ಸಂದೇಶವಿದೆ. ಆ ಸರಳತೆಯಲ್ಲಿಯೇ ಅವರ ದಿವ್ಯತೆಯಿದೆ.

ಪೂಜ್ಯ ಶ್ರೀ ಸಿದ್ಧೇಶ್ವರ ಅಪ್ಪಾಜಿಯವರ ಬದುಕು?ನಿಶ್ಯಬ್ದವಾಗಿ ಹೊತ್ತಿ ಉರಿದ ಒಂದು ಜ್ಞಾನಜ್ಯೋತಿ.

–ಡಾ. ವಿಜಯ್ ವಿ. ಮುರದಂಡೆ
ಸಹಾಯಕ ಪ್ರಾಧ್ಯಾಪಕರು,
ಕೆಎಲ್‌ಇ ಸಂಸ್ಥೆಯ ಎಸ್.ಎ. ಮಾನ್ವಿ
ಕಾನೂನು ಮಹಾವಿದ್ಯಾಲಯ, ಗದಗ

### ವಿಬಿ ಜಿ ರಾಮ್ ಜಿ ಯೋಜನೆಯಡಿ ಗ್ರಾಮೀಣ ಕೂಲಿಕಾರರಿಗೆ ನಿರಂತರ ಕೆಲಸದ ಭರವಸೆ

# ಗುಳೆ ಬೇಡ... ಊರಲ್ಲೇ 125 ದಿನ ಉದ್ಯೋಗ




**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಗ್ರಾಮೀಣ ಪ್ರದೇಶದ ಕೂಲಿಕಾರರು ಗುಳೆ ಹೋಗುವುದನ್ನು ತಪ್ಪಿಸಿ ತಮ್ಮ ಊರಿನಲ್ಲಿಯೇ ಉದ್ಯೋಗ ಪಡೆದುಕೊಳ್ಳುವ ಮಹತ್ವಾಕಾಂಕ್ಷೆಯ ಉದ್ದೇಶದೊಂದಿಗೆ ವಿಬಿ ಜಿ ರಾಮ್ ಜಿ ಯೋಜನೆಯಡಿ 125 ದಿನಗಳ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಹೇಳಿದರು.

ತಾಲೂಕಿನ ನಿಡಗುಂದಿ ಗ್ರಾಮದ ಹೊಸ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಗುರುವಾರ ವಿಬಿ ಜಿ ರಾಮ್ ಜಿ ಯೋಜನೆಯಡಿ ಆಯೋಜಿಸಿದ್ದ ವಿಭಿನ್ನ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಚಟುವಟಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗ್ರಾಮೀಣ ಕೂಲಿಕಾರರು ಉದ್ಯೋಗಕ್ಕಾಗಿ ದೂರದ ಊರುಗಳಿಗೆ ಗುಳೆ ಹೋಗುವ ಬದಲು, ತಮ್ಮ ಗ್ರಾಮದಲ್ಲಿಯೇ ಸರ್ಕಾರ ನಿಗದಿಪಡಿಸಿರುವ ದಿನಗಳವರೆಗೆ ಕೆಲಸ ನಿರ್ವಹಿಸಿ ಉದ್ಯೋಗ ಪಡೆಯಬೇಕು. ಯೋಜನೆಯಡಿ ಲಭ್ಯವಿರುವ ವೈಯಕ್ತಿಕ ಕಾಮಗಾರಿಗಳ ಸೌಲಭ್ಯವನ್ನೂ ಅರ್ಹರು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

**ಸರಿಯಾಗಿ ಕೆಲಸ ಮಾಡಿದರೆ ನಿರಂತರ ಉದ್ಯೋಗ**

ವಿಬಿ ಜಿ ರಾಮ್ ಜಿ ಯೋಜನೆಯಡಿ 125 ದಿನಗಳ ಕೆಲಸ ಪಡೆಯಲು ಕೂಲಿಕಾರರು ಜವಾಬ್ದಾರಿಯಿಂದ ಹಾಗೂ ಗುಣಮಟ್ಟದಿಂದ ಕೆಲಸ ನಿರ್ವಹಿಸಬೇಕು. ಕೂಲಿಕಾರರು ಸರಿಯಾಗಿ ಕೆಲಸ ಮಾಡಿದರೆ ಮಾತ್ರ ನಿರಂತರವಾಗಿ ಕೆಲಸ ನೀಡಲು ಸಾಧ್ಯವಾಗುತ್ತದೆ. ಆ ಮೂಲಕ 125 ದಿನಗಳ ಕಾಲ ಉದ್ಯೋಗದ ಸೌಲಭ್ಯ ಪಡೆದುಕೊಳ್ಳಬಹುದು ಎಂದು ಹೇಳಿದರು.

ಈ ನಿಟ್ಟಿನಲ್ಲಿ ನಿಡಗುಂದಿ ಗ್ರಾಮದ ಪ್ರತಿಯೊಬ್ಬ ಕೂಲಿಕಾರರೂ ಕಾಮಗಾರಿಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಯೋಜನೆಯ ಸಂಪೂರ್ಣ ಪ್ರಯೋಜನ ಪಡೆಯಬೇಕು ಎಂದು ಕರೆ ನೀಡಿದರು.

**ಹೊಸ ಕೆರೆ ತಾಲೂಕಿಗೆ ಮಾದರಿಯಾಗಲಿ**

ನಿಡಗುಂದಿ ಗ್ರಾಮದ ಹೊಸ ಕೆರೆ ಪ್ರಸ್ತುತ ತನ್ನ ಮೂಲ ಸ್ವರೂಪವನ್ನೇ ಕಳೆದುಕೊಂಡಿದೆ. ಕೆರೆಯಲ್ಲಿ ಮುಳ್ಳುಕಂಟಿಗಳು, ಗಿಡಗಂಟಿಗಳು ಹಾಗೂ ಜಾಲಿ ಮರಗಳು ಬೆಳೆದು, ಅಪಾರ ಪ್ರಮಾಣದಲ್ಲಿ ಹೂಳು ತುಂಬಿಕೊಂಡಿದೆ. ಇದರಿಂದ ಕೆರೆಯಲ್ಲಿ ನೀರು ನಿಲ್ಲದಂತಾಗಿದ್ದು, ಕೆರೆಯ ಆಕಾರವೂ ಹಾಳಾಗಿದೆ ಎಂದು ಅವರು ಹೇಳಿದರು. ಕೆರೆಯ ಪುನಶ್ಚೇತನ ಹಾಗೂ ಅಭಿವೃದ್ಧಿಗಾಗಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಅಂದಾಜು 90 ಲಕ್ಷ ರೂ. ಮೊತ್ತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಕೂಲಿಕಾರರು ಶ್ರದ್ಧೆಯಿಂದ ಕೆಲಸ ನಿರ್ವಹಿಸಿ ಕೆರೆಯನ್ನು ಅಭಿವೃದ್ಧಿಪಡಿಸಿದರೆ, ನಿಡಗುಂದಿಯ ಹೊಸ ಕೆರೆ ತಾಲೂಕಿಗೆ ಮಾದರಿ ಕೆರೆಯಾಗಿ ರೂಪುಗೊಳ್ಳಬೇಕು ಎಂದು ಆಶಿಸಿದರು.

**ಕೆರೆಯಲ್ಲೇ ಮೂಡಿದ ‘ವಿಬಿ ಜಿ ರಾಮ್ ಜಿ’ ಅಕ್ಷರ!**

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ನಿಡಗುಂದಿ ಗ್ರಾಮದ ಹೊಸ ಕೆರೆಯ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರ ಮೂಲಕ ‘ವಿಬಿ ಜಿ ರಾಮ್ ಜಿ’ ಎಂಬ ಅಕ್ಷರಗಳನ್ನು ರೂಪಿಸಲಾಯಿತು. ಅಕ್ಷರಗಳ ಮಧ್ಯೆ ಮಹಿಳಾ ಕೂಲಿಕಾರರನ್ನು ಕುಳ್ಳಿರಿಸಿ, ಸುತ್ತಲೂ ಇತರ ಕೂಲಿಕಾರರನ್ನು ನಿಲ್ಲಿಸುವ ಮೂಲಕ ವಿನೂತನ ಹಾಗೂ ವಿಭಿನ್ನ ರೀತಿಯ ಐಇಸಿ ಚಟುವಟಿಕೆ ನಡೆಸಲಾಯಿತು. ಈ ವಿಶಿಷ್ಟ ಕಾರ್ಯಕ್ರಮವು ಕೂಲಿಕಾರರ ಗಮನ ಸೆಳೆಯುವುದರ ಜತೆಗೆ ಯೋಜನೆಯ ಮಹತ್ವ, ಉದ್ಯೋಗಾವಕಾಶ ಹಾಗೂ ಅದರ ಪ್ರಯೋಜನಗಳ ಕುರಿತು ಪರಿಣಾಮಕಾರಿಯಾಗಿ ಜಾಗೃತಿ ಮೂಡಿಸಿತು.

**ತಾಲೂಕಿನಾದ್ಯಂತ ಜಾಬ್ ಕಾರ್ಡ್ ಮೇಳ**

ಸರ್ಕಾರ ಹಾಗೂ ಜಿಲ್ಲಾ ಪಂಚಾಯಿತಿ, ಗದಗ ಅವರ ನಿರ್ದೇಶನದಂತೆ ತಾಲೂಕಿನಾದ್ಯಂತ ಜಾಬ್ ಕಾರ್ಡ್ ಮೇಳ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಚಂದ್ರಶೇಖರ ಬಿ. ಕಂದಕೂರ ತಿಳಿಸಿದರು.

ಅಭಿಯಾನದಡಿ ಹೊಸ ಜಾಬ್ ಕಾರ್ಡ್ ಮಾಡಿಸುವುದು, ಈಗಾಗಲೇ ಇರುವ ಜಾಬ್ ಕಾರ್ಡ್‌ಗಳಲ್ಲಿ ಅಗತ್ಯ ತಿದ್ದುಪಡಿ ಮಾಡಿಸುವುದು ಹಾಗೂ ಇ–ಕೆವೈಸಿ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಅರ್ಹ ಕೂಲಿಕಾರರು ಈ ಸೌಲಭ್ಯವನ್ನು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

**ಮತದಾರರ ಪಟ್ಟಿ ಪರಿಷ್ಕರಣೆಗೂ ಅವಕಾಶ**

ಮತದಾರರ ಪಟ್ಟಿ ಪರಿಷ್ಕರಣೆ–2026ರ ಅಂಗವಾಗಿ ಮತದಾರರ ಪಟ್ಟಿಯಲ್ಲಿ ಹೆಸರು ತಿದ್ದುಪಡಿ ಹಾಗೂ ಹೊಸದಾಗಿ ಹೆಸರು ಸೇರ್ಪಡೆ ಮಾಡಿಸಿಕೊಳ್ಳಲು ಅವಕಾಶ ನೀಡಲಾಗಿದೆ ಎಂದು ಅವರು ಹೇಳಿದರು.

18 ವರ್ಷ ಮೇಲ್ಪಟ್ಟ ಯುವಕ–ಯುವತಿಯರು ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ಸೇರ್ಪಡೆ ಮಾಡಿಸಿಕೊಳ್ಳಬಹುದು. ಈಗಾಗಲೇ ಮತದಾರರ ಪಟ್ಟಿಯಲ್ಲಿ ಹೆಸರು ಇದ್ದು, ಅದರಲ್ಲಿ ಯಾವುದೇ ತಿದ್ದುಪಡಿ ಅಗತ್ಯವಿದ್ದರೆ ಸಂಬಂಧಪಟ್ಟ ಗ್ರಾಮದ ಬಿಎಲ್‌ಒ ಅವರನ್ನು ಸಂಪರ್ಕಿಸಿ ತಿದ್ದುಪಡಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟಿರುವ ಅರ್ಹ ಮತದಾರರು ಮರು ಸೇರ್ಪಡೆಗೆ ಅವಕಾಶವಿದ್ದು, ಪ್ರತಿಯೊಬ್ಬರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಮರೇಶ ಮೂಲಿಮನಿ, ಜಿಲ್ಲಾ ಐಇಸಿ ಸಂಯೋಜಕ ವಿ.ಎಸ್. ಸಜ್ಜನ್, ತಾಂತ್ರಿಕ ಸಹಾಯಕ ಅಜಯ್ ಹೂಗಾರ, ಬಿಲ್ ಕಲೆಕ್ಟರ್ ಮತ್ತಪ್ಪ, ಜಿಕೆಎಂ ಅನಿತಾ ಸಂಗನಾಳ, ಪಂಚಾಯಿತಿ ಸಿಬ್ಬಂದಿ, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

> **ಗ್ರಾಮೀಣ ಕೂಲಿಕಾರರು ಗುಳೆ ಹೋಗುವ ಬದಲು ತಮ್ಮ ಊರಿನಲ್ಲಿಯೇ ಲಭ್ಯವಾಗುವ ಉದ್ಯೋಗಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು. ಜವಾಬ್ದಾರಿಯಿಂದ ಕೆಲಸ ನಿರ್ವಹಿಸಿದರೆ ವಿಬಿ ಜಿ ರಾಮ್ ಜಿ ಯೋಜನೆಯಡಿ ನಿರಂತರ ಉದ್ಯೋಗ ದೊರೆಯಲಿದ್ದು, 125 ದಿನಗಳ ಕೆಲಸದ ಅವಕಾಶವನ್ನು ಪ್ರತಿಯೊಬ್ಬ ಅರ್ಹ ಕೂಲಿಕಾರರೂ ಬಳಸಿಕೊಳ್ಳಬೇಕು.**
>
> **- ಚಂದ್ರಶೇಖರ ಬಿ. ಕಂದಕೂರ, ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ, ಗಜೇಂದ್ರಗಡ**

## ಸಂಕ್ಷಿಪ್ತ ಸುದ್ದಿಗಳು

### ಶ್ರೀಕೃಷ್ಣನ ಚರಿತ್ರೆ ಓದಿ ವ್ಯಕ್ತಿತ್ವ ಅರಿಯಿರಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**
ಜಗತ್ತಿನಲ್ಲಿ ಧರ್ಮಕ್ಕೆ ಗ್ಲಾನಿ ಉಂಟಾದಾಗಲೆಲ್ಲ ಧರ್ಮದ ರಕ್ಷಣೆಗಾಗಿ ಭಗವಂತ ಅವತರಿಸುತ್ತಾನೆ. ಅದರಂತೆ ಅಧರ್ಮ ಹಾಗೂ ಕೆಟ್ಟದ್ದನ್ನು ನಾಶ ಮಾಡಿ ಧರ್ಮವನ್ನು ಸ್ಥಾಪಿಸಲು ಶ್ರೀಕೃಷ್ಣ ಅವತಾರ ತಾಳಿದ ಎಂದು ಮುಖ್ಯಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಹೇಳಿದರು.

ಪಟ್ಟಣದ ಕೋಡಿಕೊಪ್ಪದಲ್ಲಿನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶ್ರೀಕೃಷ್ಣನು ಶ್ರೀವಿಷ್ಣುವಿನ ಎಂಟನೇ ಅವತಾರವಾಗಿದ್ದು, ಮಹಾಭಾರತದ ಸಂದರ್ಭದಲ್ಲಿ ಅರ್ಜುನನಿಗೆ ಬೋಧಿಸಿದ ಭಗವದ್ಗೀತೆಯು ಇಡೀ ಮಾನವಕುಲಕ್ಕೆ ಪ್ರೀತಿ, ತ್ಯಾಗ, ಕರ್ತವ್ಯ ಹಾಗೂ ಆಧ್ಯಾತ್ಮಿಕ ಬದುಕಿನ ಮಹತ್ವವನ್ನು ಸಾರುತ್ತದೆ. ಪ್ರಜಾಪೀಡಕ ಕಂಸನನ್ನು ಸಂಹರಿಸುವ ಮೂಲಕ ಶ್ರೀಕೃಷ್ಣನು ಲೋಕಕ್ಕೆ ಮಹದುಪಕಾರ ಮಾಡಿದನು ಎಂದರು.

ಶ್ರೀಕೃಷ್ಣನ ಬಾಲ್ಯದ ಬೆಣ್ಣೆ ಹಾಗೂ ಮೊಸರು ಕದಿಯುವ ಪ್ರಸಂಗದ ಸವಿನೆನಪಿಗಾಗಿ ದಹಿಹಂಡಿ ಆಚರಿಸಲಾಗುತ್ತದೆ. ಜನ್ಮಾಷ್ಟಮಿಯಂದು ಪಾಲಕರು ಮಕ್ಕಳಿಗೆ ಬಾಲಕೃಷ್ಣನ ವೇಷ ತೊಡಿಸಿ ಮೊಸರಿನ ಗಡಿಗೆ ಒಡೆಸುವ ಮೂಲಕ ಹಬ್ಬವನ್ನು ಸಂಭ್ರಮದಿಂದ ಆಚರಿಸುತ್ತಾರೆ. ರಾಜನೀತಿಯಲ್ಲಿಯೂ ಶ್ರೀಕೃಷ್ಣ ಅತ್ಯಂತ ಶ್ರೇಷ್ಠನಾಗಿದ್ದ. ವಿದ್ಯಾರ್ಥಿಗಳು ಶ್ರೀಕೃಷ್ಣನ ಚರಿತ್ರೆಯನ್ನು ಓದಿ, ಆತನ ವ್ಯಕ್ತಿತ್ವದ ಗುಣಗಳನ್ನು ಅರಿತುಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಶಾಲೆಯ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

### ನಾಳೆ ಹಾಲಗೊಂಡ ಬಸವೇಶ್ವರ ಮಹಾರಥೋತ್ಸವ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**
ಐತಿಹಾಸಿಕ ಲಕ್ಕುಂಡಿಯ ಹಾಲಗೊಂಡ ಬಸವೇಶ್ವರ ದೇವರ 201ನೇ ರಥೋತ್ಸವ ಸೆ. 7ರಂದು ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಸಂಭ್ರಮದಿಂದ ಜರುಗಲಿದೆ.

ರಥೋತ್ಸವದ ಅಂಗವಾಗಿ ಬೆಳಿಗ್ಗೆ ಬಸವೇಶ್ವರ ಮೂರ್ತಿಗೆ ರುದ್ರಾಭಿಷೇಕ ನೆರವೇರಿಸಲಾಗುವುದು. ಸಿದ್ಧ ಸಮಾಧಿ ಯೋಗ ಸಾಧಕರ ಬಳಗ ಹಾಗೂ ಅನ್ನಪೂರ್ಣೇಶ್ವರಿ ಸತ್ಸಂಗ ಸಮಿತಿ ಆಶ್ರಯದಲ್ಲಿ, ಬೆಟಗೇರಿಯ ರಾಘವೇಂದ್ರ ಕೊಪ್ಪಳ ಅವರ ನೇತೃತ್ವದಲ್ಲಿ ಮಹಾ ಮೃತ್ಯುಂಜಯ ಹೋಮ ನಡೆಯಲಿದೆ. ಬಳಿಕ ಗ್ರಾಮದ 14 ಭಜನಾ ಸಂಘಗಳ ವತಿಯಿಂದ ವಿವಿಧ ಶಿವಶರಣರ ಭಾವಚಿತ್ರಗಳ ಮೆರವಣಿಗೆ ನಡೆಯಲಿದ್ದು, ಡಾ. ಅನ್ನದಾನೀಶ್ವರ ಸ್ವಾಮೀಜಿಗಳು ಚಾಲನೆ ನೀಡುವರು. ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಲಿದೆ. ಸಂಜೆ 4ಕ್ಕೆ ಮಹಾರಥೋತ್ಸವಕ್ಕೆ ಹರ್ಲಾಪುರದ ಡಾ. ಕೊಟ್ಟೂರೇಶ್ವರ ಸ್ವಾಮೀಜಿಗಳು ಚಾಲನೆ ನೀಡಲಿದ್ದಾರೆ. ರಥೋತ್ಸವದಲ್ಲಿ ವಿವಿಧ ಜನಪದ ಕಲಾ ತಂಡಗಳು ಪಾಲ್ಗೊಂಡು ಸಂಭ್ರಮ ಹೆಚ್ಚಿಸಲಿವೆ.

ಸೆ. 8ರಂದು ಸಂಜೆ 6ಕ್ಕೆ ಲಘು ರಥೋತ್ಸವ ನಡೆಯಲಿದೆ. ಇದರ ಬೆನ್ನಲ್ಲೇ ಸೆ. 9ರಿಂದ 11ರವರೆಗೆ ಮೂರು ದಿನಗಳ ಕಾಲ ಲಕ್ಕುಂಡಿ ಕುಸ್ತಿ ಪೈಲವಾನರ ಉಸ್ತುವಾರಿಯಲ್ಲಿ ಮಾರುತಿ ದೇವಸ್ಥಾನದ ಆವರಣದಲ್ಲಿ ಬಯಲು ಕುಸ್ತಿ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಜಾತ್ರಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

### ಪ್ರಜಾ ಸೇವೆ' ಅರಿವಾಗಿದ್ದು ಮೂರು ವರ್ಷಗಳ ಬಳಿಕವೇ?

**ವಿಜಯಸಾಕ್ಷಿ ಸುದ್ದಿ, ಗದಗ**
ರಾಜ್ಯದ ಕಾಂಗ್ರೆಸ್ ಸರ್ಕಾರ 'ಪ್ರಜಾ ಸೇವೆ' ಎಂಬ ಹೊಸ ನಾಟಕ ಆರಂಭಿಸುವ ಮೂಲಕ ಕನ್ನಡಿಗರನ್ನು ಮಂಕು ಮಾಡಲು ಹೊರಟಿದೆ ಎಂದು ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಟೀಕಿಸಿದ್ದಾರೆ.

ಸುಮಾರು 60 ವರ್ಷಗಳ ಕಾಲ ಅಧಿಕಾರ ನಡೆಸಿರುವ ಕಾಂಗ್ರೆಸ್ ಪಕ್ಷಕ್ಕೆ ಪ್ರಜೆಗಳ ಸೇವೆ ಮಾಡಬೇಕೆಂಬುದು ಈಗ ಅರಿವಾದಂತಿದೆ. ಇಷ್ಟು ವರ್ಷಗಳ ಕಾಲ ರಾಜ್ಯವನ್ನು ಕೊಳ್ಳೆ ಹೊಡೆದಿದ್ದು, ಇದೀಗ ಹಗರಣಗಳಲ್ಲಿ ಸಿಲುಕಿರುವ ಕಾಂಗ್ರೆಸ್ ಸರ್ಕಾರ ಹೊಸ ಹೊಸ ಹೆಸರುಗಳನ್ನು ಇಟ್ಟು ಜನರ ಗಮನವನ್ನು ಬೇರೆಡೆ ಸೆಳೆಯುವ ವಿಫಲ ಪ್ರಯತ್ನ ಮಾಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಚುನಾವಣೆ ವೇಳೆ 'ಪ್ರಜೆಗಳೇ ಪ್ರಭುಗಳು' ಎಂದು ಹೇಳಿ, ಜನರ ಸೇವೆ ಮಾಡುವುದಾಗಿ ಬಣ್ಣಬಣ್ಣದ ಭರವಸೆ ನೀಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರಕ್ಕೆ ಮೂರು ವರ್ಷಗಳ ಬಳಿಕ ಪ್ರಜೆಗಳ ಸೇವೆ ಮಾಡಬೇಕೆಂಬುದು ಅರಿವಾಗಿದೆಯೇ? ಅಥವಾ ಲೂಟಿ ಮಾಡಲು ಹೊಸ ಹೆಸರನ್ನು ಬಳಸುತ್ತಿದೆಯೇ ಎಂಬುದನ್ನು ಕಾದು ನೋಡಬೇಕಾಗಿದೆ ಎಂದು ವ್ಯಂಗ್ಯವಾಡಿದರು.

ಈ ಹಿಂದೆ ಕೂಡ ಹತ್ತು ಹಲವು ಹೊಸ ಹೆಸರುಗಳನ್ನು ಇಟ್ಟು ಸರ್ಕಾರದ ಹಣದಲ್ಲಿ ಪ್ರಚಾರ ಪಡೆದಿರುವುದನ್ನು ಯಾರೂ ಮರೆತಿಲ್ಲ. ಇದೀಗ ಮತ್ತೊಂದು ಹೊಸ ಹೆಸರಿನ ಮೂಲಕ ಜನರ ಗಮನವನ್ನು ಬೇರೆಡೆ ಸೆಳೆಯುವ ಪ್ರಯತ್ನ ನಡೆಯುತ್ತಿದೆ ಎಂದು ವೆಂಕನಗೌಡ ಆರ್. ಗೋವಿಂದಗೌಡ್ರ ಟೀಕಿಸಿದ್ದಾರೆ.

## ಸಂತ ಬಿ.ಜಿ ಅಣ್ಣಿಗೇರಿ ಗುರುಗಳನ್ನು ಸ್ಮರಿಸಿದ ತೋಂಟದ ಶ್ರೀ

# ಗುರು ಅಗಲಿದರೂ, ಅವರ ಸೇವೆಯ ಬೆಳಕು ಆರಲಿಲ್ಲ




**ವಿಜಯಸಾಕ್ಷಿ ಸುದ್ದಿ, ಗದಗ**
ಶಿಕ್ಷಣವೆಂದರೆ ಕೇವಲ ಅಕ್ಷರ ಕಲಿಸುವುದಲ್ಲ, ಸಂಸ್ಕಾರ ನೀಡಿ ಮನುಷ್ಯನನ್ನು ನಿರ್ಮಾಣ ಮಾಡುವುದಾಗಿದೆ. ಇಂತಹ ಸಾರ್ಥಕ ಶಿಕ್ಷಣದ ಮೂಲಕ ಮಕ್ಕಳ ಭವಿಷ್ಯ ರೂಪಿಸಿದವರು ಬಿ.ಜಿ. ಅಣ್ಣಿಗೇರಿ ಗುರುಗಳು ಎಂದು ಗದುಗಿನ ತೋಂಟದಾರ್ಯ ಮಠದ ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಬಣ್ಣಿಸಿದರು.

ನಗರದ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದ ಆವರಣದಲ್ಲಿ ಶನಿವಾರ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ (ರಿ.) ವತಿಯಿಂದ ಆಯೋಜಿಸಿದ್ದ 7ನೇ ಪುಣ್ಯಸ್ಮರಣೆ, ವಾರ್ಷಿಕ ಸರ್ವಸಾಧಾರಣ ಸಭೆ ಹಾಗೂ ಗುರುಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಅಣ್ಣಿಗೇರಿ ಗುರುಗಳು ತಮ್ಮ ಇಡೀ ಬದುಕನ್ನು ಮಕ್ಕಳ ಭವಿಷ್ಯ ಹಾಗೂ ವ್ಯಕ್ತಿತ್ವ ರೂಪಣೆಗೆ ಮೀಸಲಿಟ್ಟಿದ್ದರು. ನಿವೃತ್ತಿಯ ನಂತರವೂ ಬಡಮಕ್ಕಳ ಉದ್ಧಾರಕ್ಕಾಗಿ ಶ್ರಮಿಸಿದ ಅವರ ಸೇವೆ ಅಪಾರ. ಯಾವುದೇ ಕ್ಷೇತ್ರದಲ್ಲಿದ್ದರೂ ಸಮರ್ಪಣಾ ಭಾವದಿಂದ ಕಾರ್ಯನಿರ್ವಹಿಸಿದರೆ ಪುಣ್ಯಪುರುಷರಾಗಬಹುದು. ಶಿಕ್ಷಕರ ದಿನದಂದೇ ಲಿಂಗೈಕ್ಯರಾದ ಅಣ್ಣಿಗೇರಿ ಗುರುಗಳ ಪುಣ್ಯಸ್ಮರಣೆಯನ್ನು ಇದೇ ದಿನ ಆಚರಿಸುತ್ತಿರುವುದು ವಿಶೇಷ ಎಂದು ತೋಂಟದ ಶ್ರೀ ಹೇಳಿದರು.

ಅಣ್ಣಿಗೇರಿ ಗುರುಗಳ ಸೇವೆಯ ಸಾರ್ಥಕತೆಯನ್ನು ವಿವರಿಸಿದ ತೋಂಟದ ಶ್ರೀ, ಆಶ್ರಮದ ಮೂಲಕ ಇಂದಿಗೂ ಬಡಮಕ್ಕಳ ಶಿಕ್ಷಣಕ್ಕೆ ನೆರವು ಮುಂದುವರಿದಿರುವುದನ್ನು ಶ್ಲಾಘಿಸಿದರು. ವರ್ಷಕ್ಕೆ ಸುಮಾರು 3.40 ಲಕ್ಷ ವಿದ್ಯಾರ್ಥಿವೇತನವನ್ನು ಬಡಮಕ್ಕಳಿಗೆ ನೀಡಲಾಗುತ್ತಿದ್ದು, ಅನೇಕ ಮಕ್ಕಳು ಆಶ್ರಮದಲ್ಲಿ ಆಶ್ರಯ ಪಡೆದು ಪ್ರಸಾದ ಸ್ವೀಕರಿಸಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಅಣ್ಣಿಗೇರಿ ಗುರುಗಳ ಶಿಷ್ಯರು ಉಚಿತವಾಗಿ ಜ್ಞಾನಬೋಧೆ ಮಾಡುತ್ತಿರುವುದು ಅವರ ಸೇವಾ ಪರಂಪರೆ ಜೀವಂತವಾಗಿರುವುದಕ್ಕೆ ಸಾಕ್ಷಿ ಎಂದರು.

### ಪ್ರಶಸ್ತಿ ಮೊತ್ತವನ್ನೇ ಶಿಕ್ಷಣಕ್ಕೆ ಅರ್ಪಿಸಿದ ಗೌರಮ್ಮ

**ಪತಿಯ ಹೆಸರಿನಲ್ಲಿ ದೊರೆತ ಗೌರವವನ್ನು ಮತ್ತಷ್ಟು ಅರ್ಥಪೂರ್ಣಗೊಳಿಸಿದ ಗೌರಮ್ಮ ಅವರು 25 ಸಾವಿರದ ಪ್ರಶಸ್ತಿ ಮೊತ್ತವನ್ನು ತಾವೇ ಇಟ್ಟುಕೊಳ್ಳದೆ, ಬಡಮಕ್ಕಳ ಶಿಕ್ಷಣಕ್ಕೆ ಬಳಸಿಕೊಳ್ಳುವಂತೆ ಪ್ರತಿಷ್ಠಾನಕ್ಕೆ ಮರಳಿಸಿದರು. ಅವರ ಈ ನಡೆ ಸಮಾರಂಭದ ಪ್ರಮುಖ ವಿಶೇಷತೆಯಾಗಿ ಗಮನ ಸೆಳೆಯಿತು.**

**ಮರಣೋತ್ತರ ಗುರುಶ್ರೀ ಪ್ರಶಸ್ತಿ**
ನಿವೃತ್ತ ಮುಖ್ಯೋಪಾಧ್ಯಾಯ ದಿ. ಶಂಕ್ರಪ್ಪ ಗುರಪ್ಪ ಅಣ್ಣಿಗೇರಿ ಅವರಿಗೆ ಮರಣೋತ್ತರವಾಗಿ ಗುರುಶ್ರೀ ಪ್ರಶಸ್ತಿ ಪ್ರದಾನ ಮಾಡಲಾಯಿತು. ಅವರ ಧರ್ಮಪತ್ನಿ ಗೌರಮ್ಮ ಅವರಿಗೆ ಪ್ರಶಸ್ತಿ ಹಾಗೂ 25 ಸಾವಿರ ಮೊತ್ತದ ಚೆಕ್‌ನ್ನು ಹಸ್ತಾಂತರಿಸಲಾಯಿತು.

ರಾಜಸ್ಥಾನದ ಉದಯಪುರದ ಡಾ. ಅಶೋಕ ಭಜಂತ್ರಿ ಹಾಗೂ ತೋರಣಗಲ್ಲಿನ ಎಂ.ಎಚ್. ಪ್ರದೀಪಕುಮಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ತಮ್ಮ ಗುರುಗಳಾದ ಬಿ.ಜಿ. ಅಣ್ಣಿಗೇರಿ ಅವರ ಶಿಕ್ಷಣ ಸೇವೆಯನ್ನು ಸ್ಮರಿಸಿದರು. ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ವೇದಿಕೆಯಲ್ಲಿದ್ದರು. ಆಶ್ರಮದಲ್ಲಿ ವಿವಿಧ ಸೇವೆ ಸಲ್ಲಿಸಿದವರನ್ನು ಸನ್ಮಾನಿಸಿ ಗೌರವಿಸಲಾಯಿತು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಡಾ. ಬಸಯ್ಯ ಬೆಳ್ಳೇರಿಮಠ ಸ್ವಾಗತಿಸಿ ಪರಿಚಯಿಸಿದರು. ಮಂಜುಳಾ ತುಂಬರಮಟ್ಟಿ ನಿರೂಪಿಸಿದರು. ಆಂಜನೇಯ ಕಟಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸುಭಾಶ್ಚಂದ್ರ ಬೆಟದೂರ ವರದಿ ವಾಚಿಸಿ ವಂದಿಸಿದರು. ವಿಜಯಲಕ್ಷ್ಮೀ ಅಂಗಡಿ ಲೆಕ್ಕ ಪರಿಶೋಧನಾ ವರದಿ ಮಂಡಿಸಿದರು. ಗಣ್ಯರು ಹಾಗೂ ಹಳೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ವಾರ್ಷಿಕ ಮಹಾಸಭೆಯಲ್ಲಿ ವಿವಿಧ ಸೌಲಭ್ಯಗಳ ಮಾಹಿತಿ
## ಮಹಿಳೆಯರ ಸ್ವಾವಲಂಬನೆಗೆ ಸಂಜೀವಿನಿ ಒಕ್ಕೂಟವೇ ಬಲ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**
ಮಹಿಳೆಯರ ಆರ್ಥಿಕ ಸ್ವಾವಲಂಬನೆ ಹಾಗೂ ಗ್ರಾಮೀಣ ಜೀವನೋಪಾಯಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಲಕ್ಕುಂಡಿ ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಸಂಜೀವಿನಿ ಒಕ್ಕೂಟ ಹಾಗೂ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಮಂಗಳ ಗೌರಿ ಪೂಜೆಯೊಂದಿಗೆ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ಗ್ರಾ.ಪಂ. ಆಡಳಿತಾಧಿಕಾರಿ ಶಿವಕುಮಾರ ವಾಲಿ ಮಾತನಾಡಿ, ಮಹಿಳಾ ಸಂಜೀವಿನಿ ಒಕ್ಕೂಟದ ಕಟ್ಟಡ ನಿರ್ಮಾಣಕ್ಕೆ ಕ್ರಿಯಾ ಯೋಜನೆ ಸಿದ್ಧವಾಗಿದ್ದು, ಒಕ್ಕೂಟದ ಸದಸ್ಯರೇ ಕಟ್ಟಡ ನಿರ್ಮಿಸಿಕೊಳ್ಳಬಹುದು. ಇದಕ್ಕೂ ಮುನ್ನ ಸೂಕ್ತ ನಿವೇಶನ ಗುರುತಿಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಧಾರವಾಡ ಹಾಲು ಒಕ್ಕೂಟದ ನಿರ್ದೇಶಕ ಹನುಮಂತಗೌಡ ಹಿರೇಗೌಡ್ರ ಅವರು ಒಕ್ಕೂಟ ಹಾಗೂ ಕೆಎಂಎಫ್ ಬೆಳೆದು ಬಂದ ಹಾದಿಯ ಕುರಿತು ವಿವರಿಸಿ, ಲಕ್ಕುಂಡಿಯ ಮಹಿಳಾ ಸಂಜೀವಿನಿ ಒಕ್ಕೂಟ ಮತ್ತು ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘದ ಕ್ರಿಯಾಶೀಲ ಚಟುವಟಿಕೆಗಳನ್ನು ಶ್ಲಾಘಿಸಿದರು.

ಗ್ರಾಮೀಣ ಜೀವನೋಪಾಯ ಇಲಾಖೆಯ ಜಿಲ್ಲಾ ವ್ಯವಸ್ಥಾಪಕ ಮಡ್ಡೇಶ ಮಲ್ಲಿಮಾರ ಅವರು ಸಂಜೀವಿನಿ ಒಕ್ಕೂಟದಿಂದ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಜಿಲ್ಲಾ ವ್ಯವಸ್ಥಾಪಕ ಬಸವರಾಜ ಮೂಲಿಮನಿ ಅವರು ವಾರ್ಷಿಕ ಮಹಾಸಭೆಯ ಮಹತ್ವ ಹಾಗೂ ಉದ್ದೇಶ ವಿವರಿಸಿದರು. ಪಶುವೈದ್ಯಾಧಿಕಾರಿ ಶಿವರಾಜ ಕಲಬುರ್ಗಿ ಅವರು ಪಶು ಇಲಾಖೆಯ ವಿವಿಧ ಸೌಲಭ್ಯಗಳ ಕುರಿತು ತಿಳಿಸಿದರು.

ಪಿಡಿಒ ಅಮೀರನಾಯಕ ಅವರು ಒಕ್ಕೂಟದ ಮಹಿಳೆಯರು ಉದ್ಯಮ ಸಂಜೀವಿನಿ ಹಾಗೂ ಗ್ರಾಮ ಪಂಚಾಯಿತಿಯ ವಿವಿಧ ಕಾಮಗಾರಿಗಳ ಟೆಂಡರ್‌ಗಳಲ್ಲಿ ಭಾಗವಹಿಸುವ ಕುರಿತು ಮಾಹಿತಿ ನೀಡಿದರು. ಗ್ರಾ.ಪಂ. ಮಾಜಿ ಸದಸ್ಯ ಬಿ.ಬಿ. ಮಾಡಲಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಬಸವರಾಜೇಂದ್ರ ಸ್ತ್ರೀಶಕ್ತಿ ಸಂಘ ಹಾಗೂ ವೀರಭದ್ರೇಶ್ವರ ಸ್ತ್ರೀ ಸಂಘಗಳಿಗೆ ಉತ್ತಮ ನಿರ್ವಹಣಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಉತ್ತಮ ಕೃಷಿ ಚಟುವಟಿಕೆಗಾಗಿ ನೇತ್ರಾವತಿ ನೂಕಾಪುರ ಅವರಿಗೆ ಉತ್ತಮ ಕೃಷಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮಹಿಳಾ ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ಕಸ್ತೂರೆವ್ವ ಗುಂಜಳ ಹಾಗೂ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಅಧ್ಯಕ್ಷೆ ಶಾರದಾ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಕೆನರಾ ಬ್ಯಾಂಕ್ ವ್ಯವಸ್ಥಾಪಕ ನರೇಶ, ಕೆಸಿಸಿ ಬ್ಯಾಂಕ್ ವ್ಯವಸ್ಥಾಪಕ ಉಮೇಶ ಮುದಕಣ್ಣವರ ಉಪಸ್ಥಿತರಿದ್ದರು.

ಗೀತಾ ಮದ್ನೂರ ಹಾಗೂ ಜ್ಯೋತಿ ಬೆಂತೂರ ಸಂಜೀವಿನಿ ಒಕ್ಕೂಟದ ವರದಿ ವಾಚಿಸಿದರು. ಅನ್ನಪೂರ್ಣ ರಿತ್ತಿ ಹಾಗೂ ಅಕ್ಕಮ್ಮ ಈಟಿ ಕೆಎಂಎಫ್ ವರದಿ ವಾಚಿಸಿದರು. ಅನಸೂಯಾ ಭೂಮಣ್ಣವರ ಪ್ರಾರ್ಥಿಸಿದರು. ಸಿದ್ದು ಸತ್ಯಣ್ಣವರ ಸ್ವಾಗತಿಸಿದರು. ಚಂದ್ರಕಲಾ ಮಾಡಲಗೇರಿ ನಿರೂಪಿಸಿದರು. ಲಕ್ಷ್ಮಣ ಪೂಜಾರ ವಂದಿಸಿದರು.

> ಮಹಿಳೆಯರು ಕೇವಲ ಸಂಘಗಳ ಸದಸ್ಯರಾಗಿ ಉಳಿಯದೆ, ಲಭ್ಯವಿರುವ ಯೋಜನೆಗಳು ಹಾಗೂ ಅವಕಾಶಗಳನ್ನು ಬಳಸಿಕೊಂಡು ಸ್ವಾವಲಂಬಿಗಳಾಗಬೇಕು. ಸಂಜೀವಿನಿ ಒಕ್ಕೂಟದ ಮೂಲಕ ಮಹಿಳೆಯರ ಆರ್ಥಿಕ ಚಟುವಟಿಕೆಗಳಿಗೆ ಮತ್ತಷ್ಟು ಉತ್ತೇಜನ ನೀಡುವ ಪ್ರಯತ್ನ ನಡೆಯುತ್ತಿದೆ.
>
> - ಶಿವಕುಮಾರ ವಾಲಿ,
> ಗ್ರಾ.ಪಂ. ಆಡಳಿತಾಧಿಕಾರಿ, ಲಕ್ಕುಂಡಿ

## ಕ್ಷೇತ್ರದ ಶೇ.80ರಷ್ಟು ರಸ್ತೆ ಕಾಮಗಾರಿ 2027ರೊಳಗೆ ಪೂರ್ಣ
## 165 ಕೋಟಿಯಲ್ಲಿ ರಸ್ತೆ ಅಭಿವೃದ್ಧಿಗೆ ಭರ್ಜರಿ ಚಾಲನೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**
ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಪ್ರಮುಖ ಗ್ರಾಮಗಳು ಹಾಗೂ ಹಳ್ಳಿಗಳಿಗೆ ಸುಗಮ ಸಂಪರ್ಕ ಕಲ್ಪಿಸುವ ಉದ್ದೇಶದಿಂದ 165 ಕೋಟಿ ವೆಚ್ಚದಲ್ಲಿ ವಿವಿಧ ರಸ್ತೆ ಮತ್ತು ಸೇತುವೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ಕೆ. ನೇಮಿರಾಜ ನಾಯ್ಕ ಹೇಳಿದರು.

ತಾಲೂಕಿನ ದಶಮಾಪುರ ಗ್ರಾಮದಲ್ಲಿ ಶುಕ್ರವಾರ 3 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿ ಹಾಗೂ ವರಲಹಳ್ಳಿಯಲ್ಲಿ 5 ಕೋಟಿ ವೆಚ್ಚದಲ್ಲಿ ಸೇತುವೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಹಲವು ವರ್ಷಗಳಿಂದ ರಸ್ತೆ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳ ಜನರಿಗೆ ಕಾಮಗಾರಿಗಳಿಂದ ಅನುಕೂಲವಾಗಲಿದೆ. ಗ್ರಾಮೀಣ ಸಂಪರ್ಕ ರಸ್ತೆಗಳು ಸುಧಾರಿಸುವುದರಿಂದ ರೈತರು ತಮ್ಮ ಉತ್ಪನ್ನಗಳನ್ನು ಸಾಗಿಸಲು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಂಚರಿಸಲು ಅನುಕೂಲವಾಗಲಿದೆ ಎಂದರು.

ಕ್ಷೇತ್ರದಬಂಡಿಹಳ್ಳಿ ದಶಮಾಪುರ ನಾಣ್ಯಾಪುರ ರಸ್ತೆ, ಬ್ಯಾಸಿಗಿದೇರಿಯಿಂದ ನಂದಿಪುರದವರೆಗೆ, ಬ್ಯಾಸಿಗೇರಿ ವೃತ್ತದಿಂದ ತಂಬ್ರಹಳ್ಳಿ ಮಾರ್ಗ ಹಾಗೂ ಬ್ಯಾಲಾಳ ರಸ್ತೆ ರೈಲ್ವೆ ಗೇಟ್‌ನಿಂದ ಹಗರಿ–ಕ್ಯಾದಿಹಳ್ಳಿ ಮೂಲಕ ಚಿಲಗೋಡುವರೆಗಿನ ರಸ್ತೆ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಸೊನ್ನ ಮೋರಿಗೇರಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ 4.5 ಕೋಟಿ ವೆಚ್ಚವಾಗಲಿದ್ದು, ಶೀಘ್ರದಲ್ಲೇ ಚಾಲನೆ ನೀಡಲಾಗುವುದು ಎಂದರು.


ಚಿಂತರಪಳ್ಳಿ ರಸ್ತೆ ಅಭಿವೃದ್ಧಿಗೆ 4 ಕೋಟಿ ಮೀಸಲಿಡಲಾಗಿದ್ದು, ಮರಿಯಮ್ಮನ ಹಳ್ಳಿಯಿಂದ ಇಟಗಿ ವರೆಗೆ ಡಬಲ್ ಕೋಟಿಂಗ್ ತಾರ್ ರಸ್ತೆ ನಿರ್ಮಿಸಲಾಗುವುದು. ಓಬಳಾಪುರ, ಕೆಚ್ಚಿನಬಂಡಿ, ಹೊಸ ಆನಂದ ದೇವನಹಳ್ಳಿ ಹಾಗೂ ಹಲಗಾಪುರ ಗ್ರಾಮಗಳಲ್ಲಿ ತಲಾ 50 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಿಸಲಾಗುವುದು ಎಂದು ತಿಳಿಸಿದರು.

ಉಪ್ಪಾರಗಟ್ಟೆ ರಸ್ತೆ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ವರಲಹಳ್ಳಿ ಹಾಗೂ ಮಾಲವಿ ರಸ್ತೆ ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಕೊಟ್ಟೂರು ಹಾಗೂ ಮರಿಯಮ್ಮನಹಳ್ಳಿ ಭಾಗದ ರಸ್ತೆ ಅಭಿವೃದ್ಧಿಗೂ ಆದ್ಯತೆ ನೀಡಲಾಗುವುದು ಎಂದರು.

> 2027ರೊಳಗಾಗಿ ಹಗರಿಬೊಮ್ಮನಹಳ್ಳಿ, ಕೊಟ್ಟೂರು ಹಾಗೂ ಮರಿಯಮ್ಮನಹಳ್ಳಿ ವ್ಯಾಪ್ತಿಯ ಕ್ಷೇತ್ರದಲ್ಲಿ ಶೇ.80ರಷ್ಟು ರಸ್ತೆ ಅಭಿವೃದ್ಧಿ ಕಾಮಗಾರಿ ಗಳನ್ನು ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಹಂತ ಹಂತವಾಗಿ ಎಲ್ಲ ಪ್ರಮುಖ ಸಂಪರ್ಕ ರಸ್ತೆಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು."
>
> - ಕೆ. ನೇಮಿರಾಜ ನಾಯ್ಕ,
> ಶಾಸಕ.

ದಶಮಾಪುರದ ಮುಖಂಡರಾದ ಮಾಳಗಿ ಗಿರೀಶ್, ಚಂದ್ರಪ್ಪ, ಸಿದ್ದಬಸಪ್ಪ, ನಾಗರಾಜು, ಜಗದೀಶ್, ನೆರಗಲ್ ಬಸವರಾಜ್, ಹೋಟೆಲ್ ಸಿದ್ದರಾಜು, ವರಲಹಳ್ಳಿ ಮುಖಂಡರಾದ ಮೂರ್ತೆಪ್ಪ, ಸುರೇಶ್ ರೆಡ್ಡಿ, ಬಸವರಾಜ್, ಬ್ಯಾಟಿ ನಾಗರಾಜ್ ಸೇರಿದಂತೆ ಲೋಕೋಪಯೋಗಿ ಇಲಾಖೆ, ಪಂಚಾಯಿತಿ ಅಭಿವೃದ್ಧಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಂದು ಕಪ್ಪತ್ತಗುಡ್ಡದಲ್ಲಿ ವಿವಾಹ ಮಹೋತ್ಸವ; ನಾಳೆ ಡಂಬಳದಲ್ಲಿ ಅದ್ದೂರಿ ರಥೋತ್ಸವ
# ಕಪ್ಪತ್ತಮಲ್ಲಯ್ಯ ಭ್ರಮರಾಂಬಾದೇವಿ ಕಲ್ಯಾಣಕ್ಕೆ ಡಂಬಳ ಸಜ್ಜು



**ವಿಜಯಸಾಕ್ಷಿ ಸುದ್ದಿ, ಡಂಬಳ**
ಐತಿಹಾಸಿಕ ಹಾಗೂ ಧಾರ್ಮಿಕ ಕ್ಷೇತ್ರವಾದ ಡಂಬಳ ಕಪ್ಪತ್ತಗುಡ್ಡದಲ್ಲಿ ಶ್ರೀ ಕಪ್ಪತ್ತಮಲ್ಲೇಶ್ವರ ಹಾಗೂ ಭ್ರಮರಾಂಬಾದೇವಿ ವಿವಾಹ ಮಹೋತ್ಸವ ಮತ್ತು ಜಾತ್ರಾ ರಥೋತ್ಸವ ಸೆ. 6 ಮತ್ತು 7ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಅದ್ಧೂರಿಯಾಗಿ ನಡೆಯಲಿದೆ.

ಕಪ್ಪತ್ತಗುಡ್ಡದ ಕಪ್ಪತ್ತಮಲ್ಲೇಶ್ವರ ದೇವಸ್ಥಾನದಲ್ಲಿ ಸೆ. 6ರಂದು ಕಪ್ಪತ್ತಮಲ್ಲೇಶ್ವರ ಹಾಗೂ ಭ್ರಮರಾಂಬಾದೇವಿಯ ವಿವಾಹ ಮಹೋತ್ಸವ ಕಪ್ಪತ್ತಮಲ್ಲೇಶ್ವರ ಟ್ರಸ್ಟ್ ಕಮಿಟಿ ವತಿಯಿಂದ ನೆರವೇರಲಿದೆ. ವಿವಾಹ ಮಹೋತ್ಸವದ ಅಂಗವಾಗಿ ದಾಸೋಹ ಸಮಿತಿಯಿಂದ ಕಪ್ಪತ್ತಗುಡ್ಡದಲ್ಲಿ ಭಕ್ತರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ.

ಇದರ ಮುಂದುವರಿದ ಭಾಗವಾಗಿ ಸೆ. 7ರಂದು ಡಂಬಳ ಗ್ರಾಮದಲ್ಲಿ ಜಾತ್ರಾ ರಥೋತ್ಸವ ಜರುಗಲಿದೆ. ಡಂಬಳದ ಮೈಲಾರಲಿಂಗೇಶ್ವರ ದೇವಸ್ಥಾನದಿಂದ ಹೊರಡುವ ರಥವು ಗ್ರಾಮದ ಪ್ರಮುಖ ಪೇಟೆಯ ಮೂಲಕ ಸಂಚರಿಸಿ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ತಲುಪಲಿದೆ.

ಎರಡು ದಿನಗಳ ಧಾರ್ಮಿಕ ಕಾರ್ಯಕ್ರಮ ಗಳಲ್ಲಿ ಸುತ್ತಮುತ್ತಲಿನ ಗ್ರಾಮಗಳ ಹಾಗೂ ವಿವಿಧೆಡೆಯಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿವಾಹ ಮಹೋತ್ಸವ ಹಾಗೂ ರಥೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಕಪ್ಪತ್ತಮಲ್ಲೇಶ್ವರ ಟ್ರಸ್ಟ್ ಕಮಿಟಿ ಹಾಗೂ ಜಾತ್ರಾ ಮಹೋತ್ಸವ ಸಮಿತಿ ಪದಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಕಪ್ಪತ್ತಮಲ್ಲೇಶ್ವರ ಟ್ರಸ್ಟ್ ಕಮಿಟಿ ಅಧ್ಯಕ್ಷ ಮಹೇಶ ಗಡಗಿ, ಉಪಾಧ್ಯಕ್ಷರಾದ ಮಹೇಶ ರಾಯರಡ್ಡಿ ಹಾಗೂ ತ್ರಿಯಾಂಬಕ ಎನ್. ಬಂಡಿಹಾಳ, ಕಾರ್ಯದರ್ಶಿ ಶರಣಬಸಪ್ಪ ಪ್ಯಾಟಿ, ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಪ್ಯಾಟಿ, ಉಪಾಧ್ಯಕ್ಷ ಬಸುರಾಜ ಶಿರೋಳ, ಕಾರ್ಯದರ್ಶಿ ಶಶಿಕುಮಾರ ಸಣ್ಣಪ್ಯಾಟಿ, ಖಜಾಂಚಿ ಮಲ್ಲೇಶ ಚಿಕ್ಕರಡ್ಡಿ ಸೇರಿದಂತೆ ಉತ್ಸವ ಸಮಿತಿ, ದಾಸೋಹ ಸಮಿತಿ ಸದಸ್ಯರು ಹಾಗೂ ಭಕ್ತರು ಉತ್ಸವದ ಸಿದ್ಧತೆಯಲ್ಲಿ ತೊಡಗಿದ್ದಾರೆ.

> ಕಪ್ಪತ್ತಮಲ್ಲೇಶ್ವರ ಭ್ರಮರಾಂಬಾದೇವಿ ವಿವಾಹ ಮಹೋತ್ಸವ ಮತ್ತು ರಥೋತ್ಸವವು ಭಕ್ತಿಭಾವದಿಂದ ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಉತ್ಸವದ ಸಡಗರ ಹೆಚ್ಚಿಸಬೇಕು.
>
> - ಮಹೇಶ ಗಡಗಿ,
> ಅಧ್ಯಕ್ಷ, ಕಪ್ಪತ್ತಮಲ್ಲೇಶ್ವರ ಟ್ರಸ್ಟ್ ಕಮಿಟಿ

## ಆಸ್ಪತ್ರೆಯಲ್ಲಿ ಔಷಧಿ ಕೊರತೆ: ಪುರಸಭೆ ಅಧ್ಯಕ್ಷೆ, ಉಪಾಧ್ಯಕ್ಷೆ ದಿಢೀರ್ ಭೇಟಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**
ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಪುರಸಭೆ ಅಧ್ಯಕ್ಷೆ ರೇಷ್ಮಾ ಶಿಖಂದರ್ ಹಾಗೂ ಉಪಾಧ್ಯಕ್ಷೆ ನೇತ್ರಾವತಿ ಹುಚ್ಚಪ್ಪ ದಿಢೀರ್ ಭೇಟಿ ನೀಡಿ ಆಸ್ಪತ್ರೆಯ ಸೌಲಭ್ಯಗಳು ಹಾಗೂ ರೋಗಿಗಳ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿದರು.

ಮಕ್ಕಳ, ಮಹಿಳೆಯರ, ಪುರುಷರ ವಾರ್ಡ್, ಎನ್‌ಆರ್‌ಸಿ ಹಾಗೂ ಡಯಾಲಿಸಿಸ್ ಕೇಂದ್ರಗಳಿಗೆ ಭೇಟಿ ನೀಡಿದ ಅವರು, ಔಷಧಿಗಳ ಲಭ್ಯತೆ ಕುರಿತು ರೋಗಿಗಳಿಂದ ಮಾಹಿತಿ ಪಡೆದರು. ಕೆಲ ಔಷಧಿಗಳು ಆಸ್ಪತ್ರೆಯಲ್ಲಿ ಲಭ್ಯವಿಲ್ಲದೆ ಹೊರಗಿನಿಂದ ಖರೀದಿಸಬೇಕಾದ ಪರಿಸ್ಥಿತಿ ಕಂಡುಬಂದ ಹಿನ್ನೆಲೆಯಲ್ಲಿ ಮುಖ್ಯ ವೈದ್ಯಾಧಿಕಾರಿಗೆ ಎಚ್ಚರಿಕೆ ನೀಡಿದರು.

ಡಯಾಲಿಸಿಸ್ ಕೇಂದ್ರದಲ್ಲಿ 13 ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲಾಗುತ್ತಿದ್ದು, ಸಾರ್ವಜನಿಕರು ಸರ್ಕಾರಿ ಆಸ್ಪತ್ರೆಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಆಸ್ಪತ್ರೆಯಲ್ಲಿ ಶೌಚಾಲಯ ಸ್ವಚ್ಛತೆ ಕೊರತೆ, ವಾರ್ಡ್‌ಗಳ ಬಳಿ ಪಾದರಕ್ಷೆಗಳನ್ನು ಬಿಡುತ್ತಿರುವುದು, ಔಷಧಿಗಾಗಿ ರೋಗಿಗಳು ಅಸ್ತವ್ಯಸ್ತವಾಗಿ ನಿಲ್ಲುವುದು ಸೇರಿದಂತೆ ಮೂಲಸೌಕರ್ಯ ಸಮಸ್ಯೆಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಸಂತಾನಹರಣ ಶಸ್ತ್ರಚಿಕಿತ್ಸೆ ವೇಳೆ ರೋಗಿಗಳಿಂದ ಹಣ ಪಡೆಯುತ್ತಿರುವ ದೂರುಗಳು ಕೇಳಿಬಂದಿದ್ದು, ಇಂತಹ ಪ್ರಕರಣಗಳು ಕಂಡುಬಂದರೆ ಮೇಲಧಿಕಾರಿಗಳ ಗಮನಕ್ಕೆ ತಂದು ಕಾನೂನು ಕ್ರಮ ಕೈಗೊಳ್ಳುವುದಾಗಿ ರೇಷ್ಮಾ ಶಿಖಂದರ್ ವೈದ್ಯರಿಗೆ ಎಚ್ಚರಿಕೆ ನೀಡಿದರು.

**ಸಂಕ್ಷಿಪ್ತ ಸುದ್ದಿಗಳು**

## ಕಸದ ತೊಟ್ಟಿಗಲ್ಲ– 'ಮಮತೆಯ ತೊಟ್ಟಿಲಿಗೆ' ಹಾಕಿ

**ವಿಜಯಸಾಕ್ಷಿ ಸುದ್ದಿ, ಗದಗ**

ತಮಗೆ ಬೇಡವಾದ ನವಜಾತ ಶಿಶುಗಳು ಹಾಗೂ ಮಕ್ಕಳನ್ನು ಬೀದಿಬದಿ, ಕಸದ ತೊಟ್ಟಿ, ರೈಲು?ಬಸ್ ನಿಲ್ದಾಣ, ಆಸ್ಪತ್ರೆ, ನರ್ಸಿಂಗ್ ಹೋಂ ಆವರಣ, ಹೊಲದ ಬದು, ಹಳ್ಳ?ಕೊಳ್ಳ ಅಥವಾ ಅಜ್ಞಾತ ಸ್ಥಳಗಳಲ್ಲಿ ಬಿಟ್ಟು ಹೋಗುವುದನ್ನು ತಡೆಗಟ್ಟುವ ಉದ್ದೇಶದಿಂದ ಗದಗ ಜಿಲ್ಲೆಯಲ್ಲಿ 'ಮಮತೆಯ ತೊಟ್ಟಿಲು' ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ.

ಪರಿತ್ಯಕ್ತ ಮಕ್ಕಳಿಗೆ ಸೂಕ್ತ ಸಮಯದಲ್ಲಿ ರಕ್ಷಣೆ ದೊರೆಯದೆ ವಿಷಜಂತುಗಳು ಅಥವಾ ನಾಯಿಗಳಿಗೆ ಆಹಾರವಾಗುವಂತಹ ಅಪಾಯಕಾರಿ ಪರಿಸ್ಥಿತಿ ನಿರ್ಮಾಣವಾಗಬಹುದು. ಅಲ್ಲದೆ, ಇಂತಹ ಮಕ್ಕಳನ್ನು ಕಾನೂನುಬಾಹಿರವಾಗಿ ಸಾಕಿಕೊಳ್ಳುವ ಸಾಧ್ಯತೆಯೂ ಇದೆ. ಇದನ್ನು ತಪ್ಪಿಸಿ, ಬಾಲನ್ಯಾಯ ಕಾಯ್ದೆಯಡಿ ಕಾನೂನುಬದ್ಧ ದತ್ತು ಪ್ರಕ್ರಿಯೆ ಮೂಲಕ ಮಕ್ಕಳಿಗೆ ಉತ್ತಮ ಕುಟುಂಬ ವಾತಾವರಣ, ಪ್ರೀತಿ, ವಾತ್ಸಲ್ಯ, ರಕ್ಷಣೆ ಹಾಗೂ ಪೋಷಣೆ ಒದಗಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಈ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯಲ್ಲಿ ಪರಿತ್ಯಕ್ತ ಅಥವಾ ಬೇಡವಾದ ಮಕ್ಕಳನ್ನು ಎಲ್ಲೆಂದರಲ್ಲಿ ಬಿಸಾಡದೆ, ಸುರಕ್ಷಿತವಾಗಿ 'ಮಮತೆಯ ತೊಟ್ಟಿಲಿಗೆ' ಹಾಕಲು ಸೂಕ್ತ ಸ್ಥಳಗಳನ್ನು ಗುರುತಿಸಲಾಗಿದೆ. ಗದಗ?ಬೆಟಗೇರಿಯ ಹೆಲ್ತ್‌ಕ್ಯಾಂಪ್‌ನಲ್ಲಿರುವ ಬಾಲಕರ ಸರ್ಕಾರಿ ಬಾಲಮಂದಿರ ಹಾಗೂ ವಿಶೇಷ ದತ್ತು ಸ್ವೀಕಾರ ಕೇಂದ್ರ?ಸೇವಾ ಭಾರತಿ ಟ್ರಸ್ಟ್‌ನಲ್ಲಿ ತೊಟ್ಟಿಲುಗಳನ್ನು ಇರಿಸಲಾಗಿದೆ.

ಪರಿತ್ಯಕ್ತ ಮಗು ಎಲ್ಲಿಯಾದರೂ ಕಂಡುಬಂದಲ್ಲಿ ತಕ್ಷಣ ಮಕ್ಕಳ ಸಹಾಯವಾಣಿ 1098 ಅಥವಾ ತುರ್ತು ಸೇವೆ 112ಕ್ಕೆ ಕರೆ ಮಾಡುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಪಾಳದಲ್ಲಿ ಕಾಣೆಯಾದ ಕನ್ನಡಿಗರಿಗೆ ಡಿಎನ್‌ಎ ನೆರವು

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನೇಪಾಳ ಮತ್ತು ಟಿಬೆಟ್ ಸ್ವಾಯತ್ತ ಪ್ರದೇಶದಲ್ಲಿ ಸಂಭವಿಸಿದ ಪ್ರಕೃತಿ ವಿಕೋಪ ಹಾಗೂ ದಿಢೀರ್ ಪ್ರವಾಹದಲ್ಲಿ ಕಾಣೆಯಾಗಿರುವ ಕರ್ನಾಟಕದ ಸಂತ್ರಸ್ತರ ಗುರುತು ಪತ್ತೆಹಚ್ಚಲು ಡಿಎನ್‌ಎ ಮಾದರಿ ಸಂಗ್ರಹಿಸುವ ಉದ್ದೇಶದಿಂದ ಬೆಂಗಳೂರಿನ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯನ್ನು 'ನೋಡಲ್ ಕೇಂದ್ರ'ವನ್ನಾಗಿ ನಿಯೋಜಿಸಲಾಗಿದೆ.

ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ (ಕೆಎಸ್‌ಡಿಎಂಎ) ಹಾಗೂ ಕಂದಾಯ ಇಲಾಖೆ ಈ ಕುರಿತು ಆದೇಶ ಹೊರಡಿಸಿದ್ದು, ನೇಪಾಳದಲ್ಲಿ ಪತ್ತೆಯಾಗಿರುವ ಮೃತದೇಹಗಳ ಗುರುತು ಪತ್ತೆಹಚ್ಚಿ ಕುಟುಂಬಸ್ಥರಿಗೆ ಹಸ್ತಾಂತರಿಸುವ ಪ್ರಕ್ರಿಯೆಗೆ ಇದು ನೆರವಾಗಲಿದೆ.

ನೇಪಾಳ ಸರ್ಕಾರ ಹಾಗೂ ಕಠ್ಮಂಡುವಿನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ಸೂಚನೆಯಂತೆ, ಸದ್ಯ ಫೋಟೋ ಹಾಗೂ ಇತರ ವಿವರಗಳ ಮೂಲಕ ಗುರುತು ಪತ್ತೆಹಚ್ಚಲು ಸಾಧ್ಯವಾಗದ ಮೃತದೇಹಗಳ ಡಿಎನ್‌ಎ ಪ್ರೊಫೈಲ್ ಸಿದ್ಧಪಡಿಸಲಾಗುತ್ತಿದೆ. ಈ ಪ್ರೊಫೈಲ್‌ಗಳೊಂದಿಗೆ ಹೋಲಿಕೆ ನಡೆಸಲು ಕಾಣೆಯಾದವರ ಪ್ರಥಮ ಹಂತದ ರಕ್ತಸಂಬಂಧಿಗಳ ಡಿಎನ್‌ಎ ಮಾದರಿ ಅಗತ್ಯವಿದೆ.

ಕಾಣೆಯಾದವರ ತಂದೆ, ತಾಯಿ, ಮಗ, ಮಗಳು ಅಥವಾ ಸಂಗಾತಿ ಡಿಎನ್‌ಎ ಪರೀಕ್ಷೆಗೆ ಆಗಮಿಸಬಹುದಾಗಿದೆ. ಈ ಸಂದರ್ಭದಲ್ಲಿ ಇತ್ತೀಚಿನ ಒಂದು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಸರ್ಕಾರದಿಂದ ನೀಡಲಾದ ಗುರುತಿನ ಚೀಟಿ (ಆಧಾರ್ ಕಾರ್ಡ್ ಸೇರಿದಂತೆ) ಹಾಗೂ ಸಂಬಂಧವನ್ನು ಸಾಬೀತುಪಡಿಸುವ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು.

ಜಿಲ್ಲಾಡಳಿತ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ ದಾಖಲೆಗಳ ಪರಿಶೀಲನೆ ಪೂರ್ಣಗೊಂಡ ಬಳಿಕ ಸಂಗ್ರಹಿಸಲಾದ ಡಿಎನ್‌ಎ ಮಾದರಿಗಳನ್ನು ರಾಜ್ಯ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ (ಎಫ್‌ಎಸ್‌ಎಲ್) ಕಳುಹಿಸಲಾಗುತ್ತದೆ. ನಂತರ ಅವುಗಳನ್ನು ನೇಪಾಳದ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಹಂಚಿಕೊಳ್ಳಲಾಗುತ್ತದೆ.

**ನೋಡಲ್ ಅಧಿಕಾರಿಗಳು**

ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ವಿಧಿವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ನಾಗೇಶ್ ಕುಪ್ಪಸ್ಟ್ ಅವರನ್ನು (ಮೊ. 9742707500) ಹಾಗೂ ಆಸ್ಪತ್ರೆಯ ಆರ್‌ಎಂಒ ಡಾ. ವಾಡಿರಾಜ್ ಬಿ. ಪೊಕ್ಕನ್ ಅವರನ್ನು ನೋಡಲ್ ಅಧಿಕಾರಿಗಳಾಗಿ ನೇಮಿಸಲಾಗಿದೆ.

ನೇಪಾಳದಲ್ಲಿ ಕಾಣೆಯಾಗಿರುವವರ ಕುರಿತು ಮಾಹಿತಿ ನೀಡಲು ಅಥವಾ ಅಗತ್ಯ ನೆರವು ಪಡೆಯಲು ಕೆಎಸ್‌ಡಿಎಂಎ ಹೆಲ್ಪ್‌ಲೈನ್ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಇಂದು ನಾಟ್ಯ ಅಕಾಡೆಮಿ ವಿದ್ಯಾರ್ಥಿಗಳಿಂದ ನೃತ್ಯನಾಟಕ

**ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ನಿಮಿಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯ ದಶಕದ ಸಂಭ್ರಮದ ಅಂಗವಾಗಿ ಸೆ. 6ರಂದು ಮಧ್ಯಾಹ್ನ 3 ಗಂಟೆಗೆ ನಗರದ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ವಿದ್ಯಾರ್ಥಿಗಳಿಂದ 'ಶ್ರೀಕೃಷ್ಣಲೀಲಾ ವೈಭವ' ನೃತ್ಯನಾಟಕ ಪ್ರದರ್ಶನ ನಡೆಯಲಿದೆ.

ಕಾರ್ಯಕ್ರಮವನ್ನು ಮುಂಡರಗಿಯ ಚೈತನ್ಯ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಹಾಗೂ ಲೇಖಕಿ ವೀಣಾ ಹೇಮಂತಗೌಡ ಪಾಟೀಲ ಉದ್ಘಾಟಿಸುವರು. ನಿಮಿಷಾಂಬ ಜ್ಯೋತಿಶ್ರೀ ನಾಟ್ಯ ಅಕಾಡೆಮಿಯ ನಿರ್ದೇಶಕಿ ವಿದುಷಿ ರಾಘವಿ ಜ್ಯೋತಿಶ್ರೀ ಎಂ.ಎಲ್. ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸ್ಪರ್ಶ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಡಾ. ಪ್ರಭಾ ದೇಸಾಯಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಮುಳುಗುಂದದ ಡಾ. ಎಸ್.ಸಿ. ಚವಡಿ, ಶ್ರೀ ದ್ಯಾಮಮ್ಮ ಶ್ರೀ ದುರ್ಗಮ್ಮ ದೇವಿಯ ಜಾತ್ರಾ ಮಹೋತ್ಸವ ಸಮಿತಿ ಕಾರ್ಯಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಹಾಗೂ ವಿಬಿಐ ನ್ಯೂಸ್ ಸಂಪಾದಕ ವೆಂಕಟೇಶ ಇಮರಾಪೂರ ಪಾಲ್ಗೊಳ್ಳುವರು.

ನಾಗರತ್ನ ಕುಂಬಾರ ಕಾರ್ಯಕ್ರಮ ನಿರೂಪಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರ ನೀಡಿದೆ ಎಂದು ಅಕಾಡೆಮಿ ನಿರ್ದೇಶಕಿ ಜ್ಯೋತಿಶ್ರೀ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರಜಾಸೇವಾ ಆಂದೋಲನಕ್ಕೆ ಲಕ್ಷ್ಮೇಶ್ವರದಲ್ಲಿ ಭರ್ಜರಿ ಸ್ಪಂದನೆ

# ಜನರ ಅಹವಾಲಿಗೆ ಸ್ಥಳದಲ್ಲೇ ಪರಿಹಾರ




**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರ್ಕಾರಿ ಸೌಲಭ್ಯ ಹಾಗೂ ವಿವಿಧ ಯೋಜನೆಗಳಿಗಾಗಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಜನರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಹಮ್ಮಿಕೊಂಡಿರುವ 'ಪ್ರಜಾಸೇವಾ ಆಂದೋಲನ'ಕ್ಕೆ ಲಕ್ಷ್ಮೇಶ್ವರದಲ್ಲಿ ಭರ್ಜರಿ ಸ್ಪಂದನೆ ವ್ಯಕ್ತವಾಗಿದೆ. ಶನಿವಾರ ತಾಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಪ್ರತ್ಯೇಕ ಕೌಂಟರ್‌ಗಳ ಮೂಲಕ 200ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಲಾಯಿತು.

'ಸರ್ಕಾರ ಬಾಗಿಲಿಗೆ ಬಂತು, ಸರ್ಕಾರ–ಸೇವೆಗೆ ಇರಲಿ ಸಹಕಾರ' ಎಂಬ ಆಶಯದಡಿ ನಡೆದ ಕಾರ್ಯಕ್ರಮಕ್ಕೆ ಉಪತಹಸೀಲ್ದಾರ ಮಂಜುನಾಥ ಅಮಾಸಿ ಚಾಲನೆ ನೀಡಿದರು. ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ, ವಿವಿಧ ಪಿಂಚಣಿ ಯೋಜನೆಗಳ ಫಲಾನುಭವಿಗಳಿಗೆ ಆದೇಶ ಪತ್ರ ವಿತರಿಸಿದರು.

ಆಹಾರ, ಕಂದಾಯ, ತಾಲೂಕು ಪಂಚಾಯಿತಿ, ಪುರಸಭೆ ಹಾಗೂ ಹೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಕೌಂಟರ್‌ಗಳನ್ನು ತೆರೆಯಲಾಗಿತ್ತು. ಹೊಸ ರೇಷನ್ ಕಾರ್ಡ್‌ಗಾಗಿ ಹೆಚ್ಚಿನ ಅರ್ಜಿಗಳು ಸಲ್ಲಿಕೆಯಾಗಿದ್ದು, ಒಟ್ಟಾರೆ 200ಕ್ಕೂ ಹೆಚ್ಚು ಅರ್ಜಿಗಳು ಸ್ವೀಕೃತವಾದವು. ಸಂಧ್ಯಾ ಸುರಕ್ಷಾ, ವೃದ್ಧಾಪ್ಯ ಹಾಗೂ ಕುಟುಂಬ ನಿರ್ವಹಣೆ ಯೋಜನೆಗಳ ಫಲಾನುಭವಿಗಳಿಗೆ ಆದೇಶ ಪತ್ರ ನೀಡಲಾಯಿತು.

> ಸಾರ್ವಜನಿಕರು ಸಮಸ್ಯೆಗಳ ಪರಿಹಾರಕ್ಕಾಗಿ ವಿವಿಧ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುವುದೇ ಆಂದೋಲನದ ಉದ್ದೇಶ. ಪ್ರತಿ ತಿಂಗಳ 1 ಮತ್ತು 3ನೇ ಶನಿವಾರ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಅಹವಾಲು ಸ್ವೀಕರಿಸಲಾಗುವುದು. ಅಧಿಕಾರಿಗಳು ಅಹವಾಲು ಆಲಿಸುವುದಷ್ಟೇ ಅಲ್ಲದೆ, ನಿಯಮಾನುಸಾರ ಶೀಘ್ರ ಪರಿಹಾರ ಕಲ್ಪಿಸಬೇಕು.
>
> - ಮಂಜುನಾಥ ಅಮಾಸಿ, ಉಪ ತಹಸೀಲ್ದಾರ್

ತಾಪಂ ಇಒ ಮಂಜುಳಾ ಹಕಾರಿ ಮಾತನಾಡಿ, ಸರ್ಕಾರಿ ಯೋಜನೆಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ಅರ್ಹರಿಗೆ ಸೌಲಭ್ಯ ತಲುಪಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ಹೆಸ್ಕಾಂ ಎಇ ಆಂಜನಪ್ಪ ಬಿ., ವಿಬಿ–ಜಿ ರಾಮ್‌ಜಿ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು. ಸರ್ಕಾರಿ ಪ್ರಾಥಮಿಕ ಶಾಲೆ ನಂ.2ರ ಮಕ್ಕಳು ನಾಡಗೀತೆ ಹಾಡಿದರು. ಶಿಕ್ಷಕ ಡಿ.ಡಿ. ಲಮಾಣಿ ನಿರೂಪಿಸಿದರು.

## ಕೃಷ್ಣ–ರಾಧೆಯರಾಗಿ ಮಿಂಚಿದ ಪುಟಾಣಿಗಳು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಶ್ರೀ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಮಕ್ಕಳ ಸಂಭ್ರಮದೊಂದಿಗೆ ವಿಶಿಷ್ಟವಾಗಿ ಆಚರಿಸಲಾಯಿತು.

ಶ್ರೀಕೃಷ್ಣ ಹಾಗೂ ರಾಧೆಯ ವೇಷಭೂ ಷಣ ತೊಟ್ಟ ಪುಟಾಣಿ ಮಕ್ಕಳು ಶಾಲಾ ಆವರಣದಲ್ಲಿ ಕಣ್ಮನ ಸೆಳೆದರು. ಕೃಷ್ಣನ ವೇಷದಲ್ಲಿ ಮಕ್ಕಳು ಕೊಳಲು ಹಿಡಿದು, ತಲೆಗೆ ನವಿಲುಗರಿ ಧರಿಸಿ ಮುದ್ದಾಗಿ ಕಾಣಿಸಿಕೊಂಡರೆ, ರಾಧೆಯ ವೇಷದಲ್ಲಿದ್ದ ಬಾಲಕಿಯರು ಸಾಂಪ್ರದಾಯಿಕ ಉಡುಗೆ–ತೊಡುಗೆಯಲ್ಲಿ ಮಿಂಚಿದರು. ವಿವಿಧ ಭಂಗಿಯಲ್ಲಿ ನೃತ್ಯ ಪ್ರದರ್ಶಿಸಿದ ಮಕ್ಕಳು ಶ್ರೀಕೃಷ್ಣನ ಲೀಲೆಗಳನ್ನು ಮೆಲುಕು ಹಾಕುವಂತೆ ಮಾಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಕೆ.ಪಿ. ಸಾಲಿಮಠ ಮಾತನಾಡಿ, ಶ್ರೀಕೃಷ್ಣನ ಜೀವನ, ಆದರ್ಶ ಹಾಗೂ ಸಂದೇಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಮಕ್ಕಳಲ್ಲಿ ನಾಡಿನ ಸಂಸ್ಕೃತಿ, ಪರಂಪರೆ ಹಾಗೂ ಮೌಲ್ಯಗಳ ಕುರಿತು ಅರಿವು ಮೂಡಿಸುವಲ್ಲಿ ಇಂತಹ ಆಚರಣೆಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಶಾಲೆಯಲ್ಲಿ ವಿವಿಧ ಧರ್ಮಗಳ ಮಕ್ಕಳು ಶ್ರೀಕೃಷ್ಣನ ವೇಷ ಧರಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂಭ್ರಮಿಸಿರುವುದು ಭಾವೈಕ್ಯತೆಗೆ ಸಾಕ್ಷಿಯಾಗಿದೆ. ಮಕ್ಕಳ ಮುಗ್ಧ ನಗು, ಕೃಷ್ಣ–ರಾಧೆಯ ವೇಷಭೂಷಣ ಹಾಗೂ ನೃತ್ಯ ಪ್ರದರ್ಶನ ಎಲ್ಲರ ಗಮನ ಸೆಳೆಯಿತು ಎಂದು ಹೇಳಿದರು.

ಜನ್ಮಾಷ್ಟಮಿ ಅಂಗವಾಗಿ ಮಕ್ಕಳಿಗಾಗಿ ಕೃಷ್ಣ–ರಾಧೆ ವೇಷಭೂಷಣ ಸ್ಪರ್ಧೆ ಏರ್ಪಡಿಸಲಾಗಿತ್ತು. 20ಕ್ಕೂ ಹೆಚ್ಚು ಮಕ್ಕಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆ ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಎಸ್.ಕೆ. ಪಾಟೀಲ, ಕಾರ್ಯದರ್ಶಿ ಈಶ್ವರ ಬೆಟಗೇರಿ, ಸಿದ್ದಪ್ಪ ರಾಗಿ, ಮುಖ್ಯ ಶಿಕ್ಷಕಿ ಎನ್.ಎಸ್. ಹಿರೇಮಠ ಹಾಗೂ ಸಹ ಶಿಕ್ಷಕಿಯರು ಉಪಸ್ಥಿತರಿದ್ದರು.

ರತ್ನಾ ಕುರ್ತಕೋಟಿ ಸ್ವಾಗತಿಸಿದರು. ಈಶ್ವರ ಆದಿ ನಿರೂಪಿಸಿದರು. ರೇಖಾ ಪಾಯಪ್ಪಗೌಡ್ರ ವಂದಿಸಿದರು.

## ಪೌರಸೇವಾ ನೌಕರರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ನರಗುಂದ**

ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘದ ನರಗುಂದ ಪುರಸಭೆ ಶಾಖೆಯ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಸೆ. 3ರಂದು ನಡೆಯಿತು.

ಚುನಾವಣಾಧಿಕಾರಿ ಸಂಗಮೇಶ ಬ್ಯಾಳಿ ಅವರ ನೇತೃತ್ವದಲ್ಲಿ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಶಾಖೆಯ ಅಧ್ಯಕ್ಷರಾಗಿ ಮುತ್ತಪ್ಪ ಪಿ. ನೀಲಗುಂದ, ಉಪಾಧ್ಯಕ್ಷರಾಗಿ ಮಹಾದೇವಪ್ಪ ಎಸ್. ಜೋಗಣ್ಣವರ ಹಾಗೂ ಕಾರ್ಯದರ್ಶಿಯಾಗಿ ರೆಹಮಾನ್ ಎ. ನದಾಫ್ ಅವರು ಅವಿರೋಧವಾಗಿ ಆಯ್ಕೆಯಾದರು.

ಚುನಾವಣಾ ಪ್ರಕ್ರಿಯೆಯಲ್ಲಿ ಕರ್ನಾಟಕ ಪೌರಸೇವಾ ನೌಕರರ ಸೇವಾ ಸಂಘದ ರಾಜ್ಯ ಜಂಟಿ ಕಾರ್ಯದರ್ಶಿ ಲಾಲಸಾಬ ಮನಿಯಾರ, ರಾಜ್ಯ ಪರಿಷತ್ ಸದಸ್ಯ ಸಿದ್ದು ಹುಣಸಿಮರದ, ಗದಗ ಜಿಲ್ಲಾಧ್ಯಕ್ಷ ಮಹೇಶ ಹಡಪದ, ಕೊಪ್ಪಳ ಜಿಲ್ಲಾಧ್ಯಕ್ಷ ವಸಂತ ಬೆಲ್ಲದ, ಗದಗ ಜಿಲ್ಲಾ ನಿರ್ದೇಶಕರಾದ ಪಂಚಾಕ್ಷರಿ ದೊಡ್ಮನಿ ಹಾಗೂ ದ್ಯಾಮಣ್ಣ ರಾಮಗಿರಿ ಸೇರಿದಂತೆ ನರಗುಂದ ಪುರಸಭೆಯ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಆಶ್ರಯ ಮನೆ, ರಸ್ತೆ, ಬೀದಿ ದೀಪ, ಚರಂಡಿ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಮನವಿ

## ಜನರ ಸಮಸ್ಯೆಗಳಿಗೆ ಅಧಿಕಾರಿಗಳ ಸ್ಪಂದನೆ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಜಿಲ್ಲಾಡಳಿತ, ತಾಲೂಕು ಆಡಳಿತ, ಡಂಬಳ ಗ್ರಾಮ ಪಂಚಾಯಿತಿ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಡಂಬಳ ಗ್ರಾಮದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ನಡೆದ ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನದಲ್ಲಿ ಸಾರ್ವಜನಿಕರಿಂದ ವಿವಿಧ ಸಮಸ್ಯೆಗಳಿಗೆ ಸಂಬಂಧಿಸಿದಂತೆ 175 ಅರ್ಜಿಗಳು ಸಲ್ಲಿಕೆಯಾದವು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಹಸೀಲ್ದಾರ್ ಯರಿಸ್ವಾಮಿ, ಸರ್ಕಾರಿ ಸೇವೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗಾಗಿ ಸಾರ್ವಜನಿಕರು ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ, ಆಡಳಿತವನ್ನು ಜನರ ಬಳಿಗೆ ಕೊಂಡೊಯ್ಯುವ ಉದ್ದೇಶದಿಂದ ಪ್ರಜಾಸೇವಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಪಿಂಚಣಿ, ಪಹಣಿ, ಪಡಿತರ ಚೀಟಿ, ಕಂದಾಯ, ವಿದ್ಯುತ್, ಕುಡಿಯುವ ನೀರು, ಚರಂಡಿ ಸೇರಿದಂತೆ ವಿವಿಧ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ಅರ್ಜಿಗಳು ಹಾಗೂ ದೂರುಗಳನ್ನು ಸ್ವೀಕರಿಸಲಾಯಿತು. ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗೆ ಕಳುಹಿಸಿ ನಿಗದಿತ ಕಾಲಮಿತಿಯಲ್ಲಿ ಪರಿಹರಿಸಲಾಗುವುದು ಎಂದು ತಿಳಿಸಿದರು. ಸಮಾಜ ಕಲ್ಯಾಣ ಅಧಿಕಾರಿ ಉದಯಕುಮಾರ ಯಲಿವಾಳ ಹಾಗೂ ಬಿಇಒ ಗಂಗಾಧರ ಅಣ್ಣಿಗೇರಿ ಮಾತನಾಡಿ, ಸಾರ್ವಜನಿಕರ ಸಮಸ್ಯೆಗಳಿಗೆ ಕಾಲಮಿತಿಯಲ್ಲಿ ಪರಿಹಾರ ಒದಗಿಸುವುದು ಅಭಿಯಾನದ ಉದ್ದೇಶವಾಗಿದೆ. ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಡಂಬಳ ಹೋಬಳಿಯ ವಿವಿಧ ಗ್ರಾಮಗಳಿಂದ ಸಲ್ಲಿಕೆಯಾದ ಅರ್ಜಿಗಳಲ್ಲಿ ಆಶ್ರಯ ಮನೆಗಳ ಬೇಡಿಕೆ ಹೆಚ್ಚಿನ ಸಂಖ್ಯೆಯಲ್ಲಿತ್ತು. ಡಂಬಳ ಎಪಿಎಂಸಿಯಲ್ಲಿ ವಿದ್ಯುತ್ ದೀಪ ಅಳವಡಿಕೆ, ಸಿದ್ಧಲಿಂಗಪ್ಪ ಪ್ಲಾಟ್‌ಗೆ ತೆರಳುವ ರಸ್ತೆಯ ಕಂಬಗಳಿಗೆ ಬೀದಿ ದೀಪ, ಚರಂಡಿ ಹಾಗೂ ಸಿಸಿ ರಸ್ತೆ ನಿರ್ಮಾಣ, ನೂತನ ಕೆರೆ ಮತ್ತು ಸಾರ್ವಜನಿಕ ಶೌಚಾಲಯ ನಿರ್ಮಾಣ ಸೇರಿದಂತೆ ಹಲವು ಮೂಲಸೌಕರ್ಯ ಸಮಸ್ಯೆಗಳ ಕುರಿತು ಸಾರ್ವಜನಿಕರು ಮನವಿ ಸಲ್ಲಿಸಿದರು.

> ಸರ್ಕಾರಿ ಕಚೇರಿಗಳಿಗೆ ಅಲೆದಾಡುವ ಬದಲು ಜನರ ಸಮಸ್ಯೆಗಳನ್ನು ಅವರ ಬಳಿಯೇ ಆಲಿಸಿ, ಸಾಧ್ಯವಾದಷ್ಟು ಸ್ಥಳದಲ್ಲಿಯೇ ಪರಿಹಾರ ನೀಡುವುದು ಪ್ರಜಾಸೇವಾ ಆಂದೋಲನದ ಉದ್ದೇಶ. ಸಲ್ಲಿಕೆಯಾಗಿರುವ ಎಲ್ಲ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗೆ ರವಾನಿಸಿ, ನಿಯಮಾನುಸಾರ ಶೀಘ್ರ ಪರಿಹಾರ ಒದಗಿಸಲಾಗುವುದು.
>
> - ಯರಿಸ್ವಾಮಿ, ತಹಸೀಲ್ದಾರ್

ಮುಂಡರಗಿ ಉಪತಹಸೀಲ್ದಾರ್ ಬಿ.ಎಸ್. ಕನ್ನೂರ ಅವರು ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಿ, ಸಂಬಂಧಿಸಿದ ಇಲಾಖೆಗಳ ಗಮನಕ್ಕೆ ತಂದರು.

ಸಮಾಜ ಕಲ್ಯಾಣ ಇಲಾಖೆಯ ಅಂತರಜಾತಿ ವಿವಾಹ ಪ್ರೋತ್ಸಾಹ ಯೋಜನೆಯಡಿ ಜಂತ್ಲಿ ಶಿರೂರ ಗ್ರಾಮದ ರವಿ ಕೋಟೆಪ್ಪ ಹೊಸಮನಿ ಮತ್ತು ರಕ್ಷಿತಾ ದಂಪತಿಗೆ 1.50 ಲಕ್ಷ ಮೊತ್ತದ ಠೇವಣಿ ಬಾಂಡ್ ವಿತರಿಸಲಾಯಿತು. ಅಂಗವಿಕಲರ ಹಾಗೂ ವೃದ್ಧಾಪ್ಯ ಮಾಶಾಸನದ ಮಂಜೂರಾತಿ ಪತ್ರಗಳನ್ನು ಸ್ಥಳದಲ್ಲಿಯೇ ನೀಡಲಾಯಿತು.

ಕಾರ್ಯಕ್ರಮಕ್ಕೆ ಕೆಲವು ಇಲಾಖೆಗಳ ಸ್ಥಳೀಯ ಅಧಿಕಾರಿಗಳು ಆಗಮಿಸದೆ ತಮ್ಮ ಸಿಬ್ಬಂದಿಯನ್ನು ಕಳುಹಿಸಿರುವುದು ಕಂಡುಬಂತು.

ಕಾರ್ಯಕ್ರಮದಲ್ಲಿ ಇಒ ವಿಜಯ ಕುಮಾರ ಬೆಣ್ಣಿ, ತೋಟಗಾರಿಕಾ ಹಿರಿಯ ಅಧಿಕಾರಿ ಮಹಮ್ಮದ್ ರಫೀಕ್ ತಾಂಬೋಟಿ, ಡಂಬಳ ಉಪ ತಹಸೀಲ್ದಾರ್ ಎಸ್.ಎಸ್. ಬಿಚ್ಚಾಲಿ, ಅರಣ್ಯ ವಲಯ ಅಧಿಕಾರಿ ಮಂಜುನಾಥ ಮೇಗಲಮನಿ, ಪಶುವೈದ್ಯಾಧಿಕಾರಿ ಡಾ. ಎಸ್.ವಿ. ತಿಗರಿಮಠ, ಉಪತಹಸೀಲ್ದಾರ್ ಚಿದಾನಂದ ಬಳೂಟಗಿ, ಕಾರ್ಯಪಾಲಕ ಅಭಿಯಂತರ ನಾಗೇಂದ್ರ ಪಟ್ಟಶೆಟ್ಟರ್, ಸಿಪಿಐ ಅಯ್ಯನಗೌಡ ಪಾಟೀಲ, ಡಂಬಳ ಗ್ರಾಪಂ ಆಡಳಿತಾಧಿಕಾರಿ ಗುರುರಾಜ ಚವ್ಹಾಣ, ಕಂದಾಯ ನಿರೀಕ್ಷಕ ಪ್ರಭು ಬಾಗಲಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026 27ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ವೃತ್ತಿಪರ ಪದವಿ ಹಾಗೂ ಸ್ನಾತಕೋತ್ತರ ಪದವಿ ಕೋರ್ಸ್‌ಗಳ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಹಾಗೂ ಪೋಷಕರು ಎಸ್‌ಎಚ್‌ಪಿ (State Hostel Portal) ಮೂಲಕ [shp.karnataka.gov.in](https://shp.karnataka.gov.in) ವೆಬ್‌ಸೈಟ್‌ನಲ್ಲಿ ಸೆ.30ರೊಳಗೆ ಅರ್ಜಿ ಸಲ್ಲಿಸಬೇಕು. ಅರ್ಜಿ ಪ್ರತಿ ಹಾಗೂ ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಸಲ್ಲಿಕೆಯಾಗುವ ಅರ್ಜಿ ಅಥವಾ ಯಾವುದೇ ಕೋರಿಕೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ತಿಳಿಸಿದೆ.

ವಿದ್ಯಾರ್ಥಿಗಳು ಸರ್ಕಾರಿ ಅಥವಾ ಅಂಗೀಕೃತ ಕಾಲೇಜುಗಳಲ್ಲಿ ಮೆಟ್ರಿಕ್ ನಂತರದ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು. ವಸತಿ ನಿಲಯಗಳಲ್ಲಿ 75% ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಗೂ 25% ಇತರೆ ವರ್ಗದ ವಿದ್ಯಾರ್ಥಿಗಳಿಗೆ ಮೀಸಲಾತಿ ಕಲ್ಪಿಸಲಾಗಿದೆ.

ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗಗಳಾದ 2ಎ, 2ಬಿ, 3ಎ, 3ಬಿ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮೀರಿರಬಾರದು. ಪ್ರವರ್ಗ–1 ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ 1 ಲಕ್ಷ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮೀರಿರಬಾರದು.

ಅರ್ಜಿಯೊಂದಿಗೆ ತಹಶೀಲ್ದಾರರಿಂದ ಪಡೆದ ಜಾತಿ ಮತ್ತು ಆದಾಯ ಪ್ರಮಾಣಪತ್ರ, ವಾಸಸ್ಥಳ ಪ್ರಮಾಣಪತ್ರ, ಆಧಾರ್ ಕಾರ್ಡ್, ಅಂಕಪಟ್ಟಿ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ನಾಲ್ಕು ಭಾವಚಿತ್ರಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಅಥವಾ ಹತ್ತಿರದ ವಸತಿ ನಿಲಯಗಳನ್ನು ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗುರುವಿನ ಸ್ಮರಣೆ ಪುಣ್ಯಪ್ರದಾಯಕ: ಡಾ. ಸುಜ್ಞಾನದೇವ ಶ್ರೀಗಳು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮಾಜದಲ್ಲಿ ಗುರುವಿನ ಸ್ಥಾನಕ್ಕೆ ಅಪಾರ ಗೌರವವಿದ್ದು, ಗುರುವಿನ ಸ್ಮರಣೆ ಮಾಡುವುದರಿಂದ ಪುಣ್ಯ ಪ್ರಾಪ್ತಿಯಾಗುತ್ತದೆ. ಲಿಂ. ಶ್ರೀ ಶಂಕರ ಶಿವಾಚಾರ್ಯ ಮಹಾಸ್ವಾಮಿಗಳ ಧರ್ಮನಿಷ್ಠೆ, ಆದರ್ಶ ಜೀವನ ಹಾಗೂ ಸಮಾಜಕ್ಕೆ ನೀಡಿದ ಸೇವೆ ಸದಾ ಸ್ಮರಣೀಯವಾಗಿದೆ ಎಂದು ಮೈಸೂರು ಹಾಗೂ ಬನ್ನಿಕೊಪ್ಪದ ಜಪದಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಅವರು ಗುರುವಾರ ಪಟ್ಟಣದ ಹಳ್ಳದಕೇರಿಯ ಕರೇವಾಡಿಮಠದ ಪಟ್ಟಾಧ್ಯಕ್ಷರಾಗಿದ್ದ ಲಿಂ. ಶ್ರೀ ಶಂಕರ ಶಿವಾಚಾರ್ಯ ಮಹಾಸ್ವಾಮಿಗಳ ಪುಣ್ಯಾರಾಧನೆ ಸ್ಮರಣೋತ್ಸವ ಅಂಗವಾಗಿ ನಡೆದ ಧರ್ಮಸಭೆಯಲ್ಲಿ ದಿವ್ಯಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಶ್ರಾವಣ ಮಾಸವು ಧಾರ್ಮಿಕವಾಗಿ ಅತ್ಯಂತ ಮಹತ್ವದ್ದಾಗಿದೆ. ನಿತ್ಯದ ಜಂಜಾಟದ ನಡುವೆಯೂ ಒಳ್ಳೆಯ ಮಾತುಗಳನ್ನು ಆಲಿಸಲು ಒಂದಿಷ್ಟು ಸಮಯ ಮೀಸಲಿಡುವುದು ಅಗತ್ಯವಾಗಿದೆ ಎಂದ ಶ್ರೀಗಳು, ಇತ್ತೀಚಿನ ದಿನಗಳಲ್ಲಿ ಪಾಶ್ಚಾತ್ಯ ಜೀವನಶೈಲಿಯ ಪ್ರಭಾವ ಹೆಚ್ಚುತ್ತಿರುವ ಬಗ್ಗೆ ಬೇಸರ ವ್ಯಕ್ತಪಡಿಸಿದರು. ಪಾಲಕರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವಲ್ಲಿ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀಮಠದ ಪಟ್ಟಾಧ್ಯಕ್ಷ ಶ್ರೀ ಮಳೆಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಕರೇವಾಡಿಮಠಕ್ಕೆ ತನ್ನದೇ ಆದ ಭವ್ಯ ಇತಿಹಾಸವಿದ್ದು, ಅಪಾರ ಭಕ್ತ ಸಮೂಹವನ್ನು ಹೊಂದಿದೆ. ಮಠದ ಜೀರ್ಣೋದ್ಧಾರ ಕಾರ್ಯಕ್ಕೆ ಭಕ್ತರು ಬೆಂಬಲ ನೀಡುತ್ತಿದ್ದು, ಧಾರ್ಮಿಕ ಕಾರ್ಯಗಳ ಯಶಸ್ಸಿಗೆ ಸಮುದಾಯದ ಸಹಕಾರ ಅಗತ್ಯವಾಗಿದೆ ಎಂದರು.

ಗುರುವಾರ ಮುಂಜಾನೆಯಿಂದಲೇ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಂಡವು. ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯಸಾನ್ನಿಧ್ಯದಲ್ಲಿ ಪೂಜಾ ಕೈಂಕರ್ಯಗಳು ನಡೆದವು. ಬಳಿಕ ರುದ್ರ ಬಳಗದವರಿಂದ ರುದ್ರಪಠಣ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka